# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 126 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 29–11–2023 ಬುಧವಾರ | ಪುಟ: 4 | ಬೆಲೆ : ರೂ.2–00
Volume - 01 Issue - 126 | Title- Code: KARKAN 28269 | Chitradurga | Date: 29-11-2023 Wednesday | Page: 4 | Price: Rs. 2-00



ಒಳಪುಟದ ಸುದ್ದಿಗಳು
ಗುಣಮಟ್ಟದ ಶಿಕ್ಷಣಕ್ಕೆ ಆದ್ಯತೆ ನೀಡಿ: ಉಪನಿರ್ದೇಶಕ ಕೆ.ರವಿಶಂಕರ್ ರೆಡ್ಡಿ 2
ಕೇಂದ್ರ ಯೋಜನೆಗಳಿಂದ ಹೊರಗುಳಿದವರನ್ನು ವ್ಯಾಪ್ತಿಗೆ ತರಲು ಸಿದ್ದೇಶ್ವರ್ ಸೂಚನೆ 3
ಬಾಲಕಾರ್ಮಿಕ ಪದ್ಧತಿ ನಿಷೇಧ ಕುರಿತು ಜಾಗೃತಿ: ಬಾಲಕನ ರಕ್ಷಣೆ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಇಂದು ದಾವಣಗೆರೆ ವಿವಿ ಅಂತರ್ ಕಾಲೇಜುಗಳ ಹ್ಯಾಂಡ್‌ಬಾಲ್ ಪಂದ್ಯಾವಳಿ ಉದ್ಘಾಟನೆ

» ಚಿತ್ರದುರ್ಗ

ಕಾಲೇಜು ಶಿಕ್ಷಣ ಇಲಾಖೆ, ದಾವಣಗೆರೆ ವಿಶ್ವವಿದ್ಯಾನಿಲಯ, ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು ಐಕ್ಯೂಎಸಿ ಮತ್ತು ದಾವಣಗೆರೆ ವಿಶ್ವವಿದ್ಯಾನಿಲಯ ದೈಹಿಕ ಶಿಕ್ಷಣ ನಿರ್ದೇಶಕರ ಸಂಘದ ಸಹಯೋಗದಲ್ಲಿ ದಾವಣಗೆರೆ ವಿಶ್ವವಿದ್ಯಾನಿಲಯದ ಅಂತರ್ ಕಾಲೇಜುಗಳ ಹ್ಯಾಂಡ್‌ಬಾಲ್ ಪಂದ್ಯಾವಳಿ ಹಾಗೂ ಪುರುಷ ಮತ್ತು ಮಹಿಳೆಯರ ವಿಶ್ವವಿದ್ಯಾನಿಲಯ ತಂಡದ ಆಯ್ಕೆ ಉದ್ಘಾಟನಾ ಸಮಾರಂಭ ಇದೇ ನವೆಂಬರ್ 29ರಂದು ಬೆಳಿಗ್ಗೆ 9.30ಕ್ಕೆ ನಗರದ ಸರ್ಕಾರಿ ಕಲಾ ಮತ್ತು ವಿಜ್ಞಾನ ಕಾಲೇಜು ಮೈದಾನದಲ್ಲಿ ಏರ್ಪಡಿಸಲಾಗಿದೆ. ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಉದ್ಘಾಟಿಸುವರು. ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು ಪ್ರಾಂಶುಪಾಲ ಡಾ.ಹೆಚ್. ಗುಡ್ಡದೇಶ್ವರಪ್ಪ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ದಾವಣಗೆರೆ ವಿವಿ ದೈಹಿಕ ಶಿಕ್ಷಣ ವಿಭಾಗದ ಪ್ರಭಾರಿ ನಿರ್ದೇಶಕ ಡಾ.ವೆಂಕಟೇಶ್, ದೈಹಿಕ ಶಿಕ್ಷಣ ನಿರ್ದೇಶಕ ಎಂ.ಜೆ.ಸಾಧಿಕ್ ಭಾಗವಹಿಸುವರು. ಕಾಲೇಜಿನ ಐಕ್ಯೂಎಸಿ ಸಂಚಾಲಕ ಪ್ರೊ.ಬಿ.ಹೆಚ್.ಕುಮಾರಸ್ವಾಮಿ, ಸಾಂಸ್ಕೃತಿಕ ಸಮಿತಿ ಸಂಚಾಲಕ ಡಾ.ಡಿ.ಓ.ಸಿದ್ದಪ್ಪ, ಅಧ್ಯಾಪಕರ ಸಂಘದ ಕಾರ್ಯದರ್ಶಿ ಡಾ.ಪಿ.ಎನ್. ಮಧುಸೂದನ ಉಪಸ್ಥಿತಿವಹಿಸುವರು.

ಸಂಜೆ 4ಕ್ಕೆ ಸಮಾರೋಪ ಸಮಾರಂಭ: ದಾವಣಗೆರೆ ವಿವಿ ಅಂತರ್ ಕಾಲೇಜುಗಳ ಹ್ಯಾಂಡ್‌ಬಾಲ್ ಪಂದ್ಯಾವಳಿ ಹಾಗೂ ಪುರುಷ ಮತ್ತು ಮಹಿಳೆಯರ ವಿಶ್ವವಿದ್ಯಾನಿಲಯ ತಂಡದ ಆಯ್ಕೆ ಸಮಾರೋಪ ಸಮಾರಂಭ ನ.29ರಂದು ಸಂಜೆ 4ಕ್ಕೆ ಸರ್ಕಾರಿ ಕಲಾ ಮತ್ತು ವಿಜ್ಞಾನ ಕಾಲೇಜು ಮೈದಾನದಲ್ಲಿ ನಡೆಯಲಿದೆ. ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು ಪ್ರಾಂಶುಪಾಲ ಡಾ.ಹೆಚ್.ಗುಡ್ಡದೇಶ್ವರಪ್ಪ ಅಧ್ಯಕ್ಷತೆ ವಹಿಸುವರು. ಸರ್ಕಾರಿ ಕಲಾ ಕಾಲೇಜು ಪ್ರಾಂಶುಪಾಲ ಪ್ರೊ.ಬಿ.ಟಿ.ತಿಪ್ಪೇರುದ್ರಸ್ವಾಮಿ ಬಹುಮಾನ ವಿತರಣೆ ಮಾಡುವರು.

# ಜನಸ್ನೇಹಿ ಆಡಳಿತಕ್ಕೆ ಆರು ತಿಂಗಳು

## ಚಿತ್ರದುರ್ಗ ಜಿಲ್ಲೆಯಲ್ಲಿ ಕಂದಾಯ ಇಲಾಖೆಯಡಿ ವಿವಿಧ ಕಾರ್ಯಕ್ರಮಗಳ ಪರಿಣಾಮಕಾರಿ ಅನುಷ್ಠಾನ
## ಜಿಲ್ಲೆಯಲ್ಲಿ ಇ–ಆಫೀಸ್ ಅನುಷ್ಠಾನ, ಅಟಲ್ ಜನಸ್ನೇಹಿ ಕೇಂದ್ರದಲ್ಲಿ 3.68 ಲಕ್ಷ ಅರ್ಜಿಗಳಿಗೆ ಸೌಲಭ್ಯ








» ಚಿತ್ರದುರ್ಗ

ರಾಜ್ಯದಲ್ಲಿಪ್ರಸಕ್ತಸರ್ಕಾರಅಧಿಕಾರಕ್ಕೆಬಂದು ಆರು ತಿಂಗಳಾಗಿವೆ. ಜನರ ದೈನಂದಿನ ಬದುಕಿನ ಜೊತೆಗೆ ಒಂದಲ್ಲಾ ಒಂದು ರೀತಿಯಲ್ಲಿ ಬೆಸೆದುಕೊಂಡು, ಸರ್ಕಾರದ ವಿವಿಧ ಇಲಾಖೆಗಳಲ್ಲಿ ಅತ್ಯಂತ ಪ್ರಮುಖ ಪಾತ್ರ ವಹಿಸುವ ಕಂದಾಯ ಇಲಾಖೆಯು ಜನರ ಶ್ರೇಯೋಭಿವೃದ್ಧಿಗಾಗಿ ಸರ್ಕಾರ ಜಾರಿಗೊಳಿಸುವ ವಿವಿಧ ಯೋಜನೆಗಳನ್ನು ಚಿತ್ರದುಗ ಜಿಲ್ಲೆಯಲ್ಲಿ ಕಳೆದ 06 ತಿಂಗಳ ಅವದಿಯಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಕ್ಕೆ ತರುವ ಕೆಲಸವನ್ನು ಮಾಡಿದೆ ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ. ಅವರು ತಿಳಿಸಿದ್ದಾರೆ.

ಪ್ರಸಕ್ತ ಸರ್ಕಾರಕ್ಕೆ ಆರು ತಿಂಗಳು ಪೂರ್ಣಗೊಂಡಿರುವ ಹಿನ್ನೆಲೆಯಲ್ಲಿ ಕಂದಾಯ ಇಲಾಖೆಯಡಿ ಈ ಅವಧಿಯಲ್ಲಿ ಆಗಿರುವ ಸಾಧನೆ ಹಾಗೂ ಪ್ರಗತಿಯ ಬಗ್ಗೆ ಮಾಹಿತಿ ನೀಡಿರುವ ಅವರು, ಸಾರ್ವಜನಿಕರ ದೈನಂದಿನ ಬದುಕಿನಲ್ಲಿ ಹಾಸುಹೊಕ್ಕಾಗಿರುವ ಕಂದಾಯ ಇಲಾಖೆಯು ಜನಸಾಮಾನ್ಯರ ಜೀವನಕ್ಕಾಗಿ, ಜನರ ಆಶೋತ್ತರಗಳನ್ನು ಈಡೇರಿಸುವಸಲುವಾಗಿಸರ್ಕಾರದಹಲವು ಸೌಲಭ್ಯಗಳು, ಯೋಜನೆಗಳು ಅಲ್ಲದೆ ಅವರ ಸಮಸ್ಯೆಗಳಿಗೆ ಪರಿಹಾರ ನೀಡುವ ಮಹತ್ತರ ಕಾರ್ಯ ನಿರ್ವಹಿಸುತ್ತಿದೆ. ಹೀಗಾಗಿ ಕಂದಾಯ ಇಲಾಖೆಯನ್ನು ಜನಸ್ನೇಹಿಯನ್ನಾಗಿಸುವಉದ್ದೇಶದಿಂದಾಗಿ ಕಚೇರಿ ಕೆಲಸ ಕಾರ್ಯಗಳ ಪ್ರಕ್ರಿಯೆಗಳನ್ನು ಸರ್ಕಾರ ಸರಳ, ಪಾರದರ್ಶಕ ಹಾಗೂ ಡಿಜಟಲೀಕರಣಗೊಳಿಸಿದೆ. ಕಳೆದ ಆರು ತಿಂಗಳಿನ ಅವಧಿಯಲ್ಲಿ ಇಲಾಖೆಯ ಕೆಲಸದ ಕಾರ್ಯವೈಖರಿಯನ್ನು ಸಾಕಷ್ಟು ಸರಳೀಕರಣಗೊಳಿಸಲಾಗಿದೆ. ಜನರ ನೂರಾರು ಸಮಸ್ಯೆಗಳಿಗೆ ಶೀಘ್ರ ಸ್ಪಂದಿಸಲಾಗಿದೆ, ಬಗೆಹರಿಸಲಾಗಿದೆ. ಜನಸ್ನೇಹಿಯಾಗಿ ಕಾರ್ಯನಿರ್ವಹಿಸುವಂತೆ ಅಧಿಕಾರಿಗಳಿಗೆ ತಾಕೀತು ಮಾಡಲಾಗಿದೆ. ಇತ್ತೀಚೆಗಷ್ಟೇ ಜಿಲ್ಲೆಗೆ ಆಗಮಿಸಿದ್ದ ಕಂದಾಯ ಸಚಿವರಾದ ಕೃಷ್ಣ ಭೈರೇಗೌಡ ಅವರು, ಜಿಲ್ಲೆಯ ಕಂದಾಯ ಇಲಾಖೆಯ ವಿವಿಧ ಕೆಲಸ ಕಾರ್ಯಗಳ ಪ್ರಗತಿ ಪರಿಶೀಲನೆ ನಡೆಸಿದ್ದು, ಇನ್ನಷ್ಟು ಪರಿಣಾಮಕಾರಿ ಅನುಷ್ಠಾನಕ್ಕೆ ಅಧಿಕಾರಿಗಳಿಗೆ ಮಾರ್ಗದರ್ಶನ ನೀಡಿರುತ್ತಾರೆ.ಜನರು ತಮ್ಮ ಸಮಸ್ಯೆಗಳ ಪರಿಹಾರಕ್ಕೆ ಸರ್ಕಾರಿ ಕಚೇರಿಗಳಿಗೆ, ಜಿಲ್ಲಾ ಅಥವಾ ತಾಲ್ಲೂಕು ಕೇಂದ್ರಗಳಿಗೆ ಅಲೆದಾಡುವುದನ್ನು ತಪ್ಪಿಸುವ ಸಲುವಾಗಿ, ಸರ್ಕಾರವೇ ಜನರ ಬಳಿಗೆ ತೆರಳಿ, ಜನರ ಅಹವಾಲುಗಳನ್ನು ಆಲಿಸಿ, ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬೇಕು ಎನ್ನುವ ಸದುದ್ದೇಶದಿಂದ ಮುಖ್ಯಮಂತ್ರಿಗಳಾದ ಶ್ರೀ ಸಿದ್ದರಾಮಯ್ಯ ಅವರು, ತಿಂಗಳಿಗೊಮ್ಮೆ ಜಿಲ್ಲಾ ಉಸ್ತುವಾರಿ ಸಚಿವರು ಜಿಲ್ಲಾ ಮಟ್ಟದಲ್ಲಿ ಹಾಗೂ ಪ್ರತಿ ಹದಿನೈದು ದಿನಗಳಿಗೊಮ್ಮೆ ತಾಲ್ಲೂಕು ಮಟ್ಟದಲ್ಲಿ ಜಿಲ್ಲಾಧಿಕಾರಿಗಳು ಜನರ ಕುಂದುಕೊರತೆ ಅರ್ಜಿಗಳನ್ನು ಪಡೆದು, ತ್ವರಿತವಾಗಿ ಸ್ಪಂದಿಸುವಂತೆ "ಜನತಾದರ್ಶನ" ಎನ್ನುವ ವಿನೂತನ ಕಾರ್ಯಕ್ರಮವನ್ನು ಆಯೋಜಿಸಲು ಸೂಚಿಸಿದ್ದಾರೆ. ಅದರಂತೆ ಈಗಾಗಲೆ ಜಿಲ್ಲೆಯಲ್ಲಿ ಹಿರಿಯೂರು ಮತ್ತು ಧರ್ಮಪುರದಲ್ಲಿ ಜಿಲ್ಲಾ ಮಟ್ಟದ ಜನತಾದರ್ಶನ ಹಾಗೂ ಚಿತ್ರದುರ್ಗ, ಹೊಸದುರ್ಗ ಮತ್ತು ಅತ್ತಿಮಗ್ಗೆ ಯಲ್ಲಿ ತಾಲ್ಲೂಕು ಮಟ್ಟದ ಜನತಾದರ್ಶನ ಕಾರ್ಯಕ್ರಮವನ್ನು ಅತ್ಯಂತ ಯಶಸ್ವಿಯಾಗಿ ಹಮ್ಮಿಕೊಳ್ಳಲಾಗಿದೆ. ಜನತಾದರ್ಶನದಲ್ಲಿ ಒಟ್ಟು 1129 ಅರ್ಜಿಗಳು ಸಲ್ಲಿಕೆಯಾಗಿದ್ದು, ನಿಗದಿತ ಕಾಲಮಿತಿಯೊಳಗೆ ಸಾರ್ವಜನಿಕರ ಅರ್ಜಿಗಳನ್ನು ಇತ್ಯರ್ಥಪಡಿಸಲಾಗುತ್ತಿದೆ. ಇವೆಲ್ಲ ಅರ್ಜಿಗಳನ್ನು ಐಪಿಜಿಆರ್‌ಎಸ್ ತಂತ್ರಾಂಶದಲ್ಲಿ ನಮೂದಿಸಿ, ಗಣಕೀಕೃತಗೊಳಿಸಲಾಗಿದೆ.

ಅಟಲ್ ಜನಸ್ನೇಹಿಕೇಂದ್ರದಲ್ಲಿ3.68ಲಕ್ಷಅರ್ಜಿಗಳಿಗೆ ಸೇವೆ: ಅಟಲ್ ಜೀ ಜನಸ್ನೇಹಿ ಕೇಂದ್ರದಲ್ಲಿನ 42 ಸಾರ್ವಜನಿಕ ಸೇವೆಗಳ ಪೈಕಿ 22 ಸೇವೆಗಳನ್ನು ಎನ್‌ಕೆ–4 ರಿಂದ ಎನ್‌ಕೆ–5 ವರ್ಷನ್‌ಗೆ ವಿಲೀನಗೊಳಿಸಲಾಗಿದೆ. ಸಾರ್ವಜನಿಕರು ವಿವಿಧ ಸೇವೆ ಬಯಸಿ ಆನ್‌ಲೈನ್ ಮೂಲಕ ಸಲ್ಲಿಸುವ ಅರ್ಜಿಗಳ ಪ್ರತಿಯೊಂದು ಸ್ಥಿತಿಗತಿಗಳ ಬಗ್ಗೆ ಅರ್ಜಿದಾರರ ಮೊಬೈಲ್‌ಗಳಿಗೆ ಸಂದೇಶ ರವಾನೆಯಾಗುವ ವ್ಯವಸ್ಥೆ ಕಲ್ಪಿಸಲಾಗಿರುತ್ತದೆ. ಕಳೆದ 6 ತಿಂಗಳಿಂದ ಜಿಲ್ಲೆಯ ಎಲ್ಲಾ ಅಟಲ್ ಜೀ ಜನಸ್ನೇಹಿ ಕೇಂದ್ರದಲ್ಲಿ ಒಟ್ಟಾರೆಯಾಗಿ 4,41,496 ಅರ್ಜಿಗಳು ಸ್ವೀಕೃತವಾಗಿದ್ದು, ಈ ಪೈಕಿ 3,68,094 ಅರ್ಜಿಗಳಿಗೆ ವಿವಿಧ ಸೇವೆ ಒದಗಿಸಲಾಗಿದೆ. 51,876 ಅರ್ಜಿಗಳು ನಾನಾ ಕಾರಣಗಳಿಗಾಗಿ ತಿರಸ್ಕೃತಗೊಂಡಿದ್ದು, ಒಟ್ಟಾರೆಯಾಗಿ 4,19,970 ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದೆ. ಜಿಲ್ಲೆಯಲ್ಲಿ ಅಟಲ್ ಜೀ ಜನಸ್ನೇಹಿ ಕೇಂದ್ರದಲ್ಲಿ ಶೇ.95.12 ರಷ್ಟು ಉತ್ತಮ ಪ್ರಗತಿ ಸಾಧಿಸಲಾಗಿದೆ.

ಮ್ಯುಟೇಷನ್ ವಿಲೇವಾರಿ ಶೇ.96.51 ಪ್ರಗತಿ: ಭೂಮಿ ತಂತ್ರಾಂಶದ ಮೂಲಕ ಜಮೀನುಗಳ ಮ್ಯುಟೇಷನ್ ವಹಿವಾಟು ವಿಲೇವಾರಿ ಪ್ರಕ್ರಿಯೆ ಈಗಾಗಲೇ ಚಾಲ್ತಿಯಲ್ಲಿದ್ದು, ಕಾಲಮಿತಿಯೊಳಗೆ ವಹಿವಾಟು ವಿಲೇವಾರಿ ಮಾಡುವಂತೆ ಸರ್ಕಾರದಿಂದ ಸ್ಪಷ್ಟ ನಿರ್ದೇಶನವಿದೆ. ಕಳೆದ 6 ತಿಂಗಳ ಅವಧಿಯಲ್ಲಿ ವಿವಾದರಹಿತ ಮ್ಯುಟೇಷನ್‌ಗಳು, ಋಣಭಾರಗಳು, ವಿವಾದಿತ ಮ್ಯುಟೇಷನ್‌ಗಳ ವಿಲೇವಾರಿ ಯಲ್ಲಿ ಒಟ್ಟಾರೆಯಾಗಿ 44,710 ಪ್ರಕರಣಗಳಲ್ಲಿ 43,151 ವಿಲೇವಾರಿ ಮಾಡಲಾಗಿದ್ದು, ಶೇ.96.51 ರಷ್ಟು ಪ್ರಗತಿ ಸಾಧಿಸಲಾಗಿದೆ.

458 ಪೈಕಿ ಪಹಣಿ ಪ್ರಕರಣ ವಿಲೇವಾರಿ: ಭೂಮಿ ತಂತ್ರಾಂಶದಡಿಯಲ್ಲಿ ಪೈಕಿ ಪಹಣಿಗಳ ಒಟ್ಟುಗೂಡಿಸುವಿಕೆ ಪ್ರಕ್ರಿಯೆ ಪ್ರಗತಿಯಲ್ಲಿದ್ದು, ಪೈಕಿ ಪಹಣಿಗಳನ್ನು ಒಟ್ಟುಗೂಡಿಸಲು ಜಿಲ್ಲೆಯಲ್ಲಿ ಒಟ್ಟಾರೆ 516 ಪ್ರಕರಣಗಳು ಬಾಕಿ ಇರುತ್ತದೆ. ಕಳೆದ 6 ತಿಂಗಳಲ್ಲಿ ಬಾಕಿ ಇರುವ 516 ಪ್ರಕರಣಗಳ ಪೈಕಿ 458 ಪ್ರಕರಣಗಳ ಪೈಕಿ ಪಹಣಿಗಳನ್ನು ಒಟ್ಟುಗೂಡಿಸಲಾಗಿದ್ದು, ಶೇ.88.75 ರಷ್ಟು ಪ್ರಗತಿ ಸಾಧಿಸಲಾಗಿದೆ.


ಪುಟ ↘ 2


### ಡಿ.10ರಂದು ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆಗೆ ಲಿಖಿತ ಪರೀಕ್ಷೆ

» ಚಿತ್ರದುರ್ಗ

2022–23ನೇ ಸಾಲಿನ ಪೊಲೀಸ್ ಕಾನ್ಸ್‌ಟೇಬಲ್ (ಸಿವಿಲ್)–454 ಹುದ್ದೆಗಳನ್ನು ಭರ್ತಿ ಮಾಡುವ ಸಲುವಾಗಿ ನೇಮಕಾತಿ ಪ್ರಕ್ರಿಯೆ ಕೈಗೊಳ್ಳಲಾಗಿದ್ದು, ಅರ್ಜಿ ಸಲ್ಲಿಸುವ ಅರ್ಹ ಅಭ್ಯರ್ಥಿಗಳಿಗೆ ನಿಯಮಾನುಸಾರ ಡಿಸೆಂಬರ್ 10ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 12.30 ರವರೆಗೆ ಚಿತ್ರದುರ್ಗ ನಗರದಲ್ಲಿ ಒಟ್ಟು 8 ಶಾಲಾ, ಕಾಲೇಜುಗಳಲ್ಲಿ ಲಿಖಿತ ಪರೀಕ್ಷೆ ನಡೆಯಲಿದೆ. ಚಿತ್ರದುರ್ಗ ನಗರದ ಬಾಪೂಜಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 400 ಅಭ್ಯರ್ಥಿಗಳು, ಬಾಲಕರ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ 400 ಅಭ್ಯರ್ಥಿಗಳು, ಸರ್ಕಾರಿ ಕಲಾ ಕಾಲೇಜಿನಲ್ಲಿ 500 ಅಭ್ಯರ್ಥಿಗಳು, ಎಸ್‌ಜೆಎಂ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿಯಲ್ಲಿ 400 ಅಭ್ಯರ್ಥಿಗಳು, ಎಸ್‌ಆರ್‌ಎಸ್ ಹೆರಿಟೇಜ್ ಶಾಲೆಯಲ್ಲಿ 700 ಅಭ್ಯರ್ಥಿಗಳು, ಸಂತಜೋಸೆಫ್ ಬಾಲಕಿಯರ ಪ್ರೌಢಶಾಲೆಯಲ್ಲಿ 380 ಅಭ್ಯರ್ಥಿಗಳು, ವಾಸವಿ ವಿದ್ಯಾಸಂಸ್ಥೆಯಲ್ಲಿ 540 ಅಭ್ಯರ್ಥಿಗಳು ಹಾಗೂ ವಿದ್ಯಾವಿಕಾಸ ಆಂಗ್ಲ ಪ್ರೌಢಶಾಲೆಯಲ್ಲಿ 400 ಅಭ್ಯರ್ಥಿಗಳು ಸೇರಿದಂತೆ ಚಿತ್ರದುರ್ಗ ನಗರದ 8 ಪರೀಕ್ಷೆ ಕೇಂದ್ರಗಳಿಂದ ಒಟ್ಟು 3720 ಅಭ್ಯರ್ಥಿಗಳು ಪರೀಕ್ಷೆ ಹಾಜರಾಗಲಿದ್ದಾರೆ. ಲಿಖಿತ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳು ಯಾವುದೇ ರೀತಿಯ ಪುಸ್ತಕ, ಕೈಬರಹ ಚೀಟಿ, ಪೇಜರ್, ಕ್ಯಾಲ್ಕುಲೇಟರ್, ಇಯರ್‌ಫೋನ್, ಮೊಬೈಲ್‌ಫೋನ್ ಪರೀಕ್ಷೆಗೆ ತರಲು ನಿಷೇಧಿಸಲಾಗಿದೆ. ಅಭ್ಯರ್ಥಿಗಳು ಬೆಲೆ ಬಾಳುವ ವಸ್ತು, ಸಾಮಾಗ್ರಿ ತರದಂತೆ ತಿಳಿಸಲಾಗಿದ್ದು, ತಮ್ಮ ವಸ್ತುಗಳಿಗೆ ತಾವೇ ಜವಾಬ್ದಾರರು. ಅಭ್ಯರ್ಥಿಗಳಿಗೆ ಕರೆಪತ್ರದ ಬಗ್ಗೆ ಮುಂಬರುವ ದಿನಗಳಲ್ಲಿ ಎಸ್‌ಎಂಎಸ್ ಮೂಲಕ ಮಾಹಿತಿ ನೀಡಲಾಗುವುದು ಹಾಗೂ ಕರೆಪತ್ರದ ಲಿಂಕ್ ಸಹ ಕಳಿಸಲಾಗುವುದು. ಅಭ್ಯರ್ಥಿಗಳು ಕರೆಪತ್ರ ಡೌನ್‌ಲೋಡ್ ಮಾಡಿಕೊಂಡು ನಿಗಧಿಪಡಿಸಿದ ದಿನಾಂಕದಂದು ಲಿಖಿತ ಪರೀಕ್ಷೆಗೆ ಹಾಜರಾಗಲು ಸೂಚಿಸಿದೆ .




## ಫಾಸ್ಟ್ ನ್ಯೂಸ್

### ಜನಸ್ನೇಹಿ ಆಡಳಿತಕ್ಕೆ ಆರು ತಿಂಗಳು

» ಮೊದಲ ಪುಟದಿಂದ

ಆಡಳಿತದಲ್ಲಿ ಪಾರದರ್ಶಕತೆಗೆ ಇ–ಆಫೀಸ್ ಅನುಷ್ಠಾನ : ಕಂದಾಯ ಇಲಾಖೆಯ ದೈನಂದಿನ ಕಡತಗಳ ಚಲನವಲನಗಳಲ್ಲಿ ಪಾರದರ್ಶಕೆಯನ್ನು ತರಲು ಇ–ಆಫೀಸ್ ಅನುಷ್ಠಾನವನ್ನು ಕಡ್ಡಾಯಗೊಳಿಸಲಾಗಿದೆ. ಜಿಲ್ಲಾಧಿಕಾರಿಗಳ ಕಚೇರಿ, ಉಪವಿಭಾಗಾಧಿಕಾರಿಗಳ ಕಚೇರಿ ಹಾಗೂ ಜಿಲ್ಲೆಯ ಎಲ್ಲಾ ತಾಲ್ಲೂಕು ಕಚೇರಿಗಳಲ್ಲಿ ಈಗಾಗಲೇ ಇ–ಆಫೀಸ್ ಅನುಷ್ಠಾನಗೊಂಡು ಕಾರ್ಯರೂಪದಲ್ಲಿ ಜಾರಿಯಾಗಿರುತ್ತದೆ. ಇ–ಆಫೀಸ್ ವ್ಯವಸ್ಥೆಯಿಂದ ಕಡತ ವಿಲೇವಾರಿಯಲ್ಲಿ ವೇಗ, ಪಾರದರ್ಶಕತೆ ಬರಲಿದ್ದು, ಪ್ರತಿ ಕಡತವೂ ಸುರಕ್ಷಿತವಾಗಿರಲಿದೆ. ಜಿಲ್ಲೆಯಲ್ಲಿ ಇ–ಆಫೀಸ್‌ನಡಿ ಒಟ್ಟು 26,661 ಸ್ವೀಕೃತಿಗಳು ಸೃಜನೆಯಾಗಿದ್ದು, 33,881 ಕಡತಗಳು ಚಲನೆಗೊಂಡಿವೆ.

ಸರ್ಕಾರಿ ಜಮೀನುಗಳ ಫ್ಲಾಗಿಂಗ್ ಕಾರ್ಯ: ಸರ್ಕಾರದ ಆಸ್ತಿ, ಭೂಮಿ ಸುರಕ್ಷಿತವಾಗಿಸುವುದು ಹಾಗೂ ಒತ್ತುವರಿಯಾಗುವುದನ್ನು ತಡೆಗಟ್ಟುವುದು ಸರ್ಕಾರದ ಉದ್ದೇಶವಾಗಿದ್ದು, ಈ ನಿಟ್ಟಿನಲ್ಲಿ ರಾಜ್ಯ ವ್ಯಾಪ್ತಿಯಲ್ಲಿ ಇರುವಂತಹ ಎಲ್ಲಾ ವಿಧದ ಸರ್ಕಾರಿ ಜಮೀನುಗಳು, ಮಂಜೂರಾತಿ ಜಮೀನುಗಳ ಮಾಹಿತಿಯನ್ನು ತಂತ್ರಾಂಶದಲ್ಲಿ ಇಂಡೀಕರಿಸುವಂತಹ ಫ್ಲಾಗಿಂಗ್ ಕಾರ್ಯವನ್ನು ಸರ್ಕಾರ ಜಾರಿಗೊಳಿಸಿದೆ. ಜಿಲ್ಲೆಯಲ್ಲಿನ 23,300 ವಿವಿಧ ಸರ್ಕಾರಿ ಜಮೀನುಗಳು ಹಾಗೂ 20,319 ಮಂಜೂರಾತಿ ಜಮೀನುಗಳನ್ನು ತಂತ್ರಾಂಶದಲ್ಲಿ ಫ್ಲಾಗ್ ಮಾಡಲಾಗಿದೆ. ಜಿಲ್ಲೆಯಲ್ಲಿ ಪ್ರಸಕ್ತ ವರ್ಷ ಮಳೆಯ ಕೊರತೆಯಿಂದಾಗಿ ಎಲ್ಲ ತಾಲ್ಲೂಕುಗಳನ್ನು ಬರಪೀಡಿತ ತಾಲ್ಲೂಕುಗಳೆಂದು ಸರ್ಕಾರ ಘೋಷಿಸಿದ್ದು, ರೈತರಿಗೆ ಬರ ಪರಿಹಾರ ಮತ್ತು ಅಗತ್ಯ ಸೇವೆಗಳನ್ನು ನೀಡುವ ಹಾಗೂ ಕುಡಿಯುವ ನೀರಿನ ಸಮಸ್ಯೆಗಳು ಕಂಡುಬರುವ ಭಾಗದಲ್ಲಿ ಅಗತ್ಯವಾಗಿ ಏನೆಲ್ಲಾ ಕ್ರಮಗಳನ್ನು ಜರುಗಿಸಬೇಕು ಎಂಬುದರ ಬಗ್ಗೆ ಕಾಲಕಾಲಕ್ಕೆ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಬರ ಪರಿಸ್ಥಿತಿಯ ಸಮರ್ಪಕ ನಿರ್ವಹಣೆಗಾಗಿ ಕೈಗೊಳ್ಳಬೇಕಿರುವ ಕ್ರಮಗಳ ಕುರಿತು ಕಾಲಕಾಲಕ್ಕೆ ಸಭೆ ನಡೆಸಿ ಅಧಿಕಾರಿಗಳಿಗೆ ನಿರ್ದೇಶನಗಳನ್ನು ನೀಡಲಾಗುತ್ತಿದೆ. ಸಾರ್ವಜನಿಕರ ನ್ಯಾಯಯುತ ಮನವಿ, ಕೋರಿಕೆಗೆ ಸ್ಪಂದಿಸಲಾಗುತ್ತಿದೆ. ಮುಂದಿನ ದಿನಗಳಲ್ಲೂ ಸಹ ಜನರಿಗೆ ಸರಳ, ಸುಲಭ ಮತ್ತು ತ್ವರಿತ ಆಡಳಿತ ನೀಡುವ ನಿಟ್ಟಿನಲ್ಲಿ ಅಗತ್ಯವಿರುವ ಎಲ್ಲ ಕ್ರಮಗಳನ್ನು ಕೈಗೊಳ್ಳಲು ಜಿಲ್ಲಾಡಳಿತ ಸೂಕ್ತ ರೀತಿಯಲ್ಲಿ ಜನರಿಗೆ ಸ್ಪಂದಿಸಲಿದೆ ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಅವರು ತಿಳಿಸಿದ್ದಾರೆ.

### ಕನ್ನಡ ರಾಜ್ಯೋತ್ಸವ ಸುಸಂಪನ್ನ

▪ ದಾವಣಗೆರೆ

ದಾವಣಗೆರೆ ಉತ್ತರ ವಲಯದ ವ್ಯಾಪ್ತಿಯಲ್ಲಿ ಬರುವ ಎಸ್‌ಪಿಎಸ್ ನಗರದ ಸರ್ಕಾರಿ ಪ್ರೌಢಶಾಲೆಯಲ್ಲಿ ಕರ್ನಾಟಕ ರಾಜ್ಯೋತ್ಸವದ ಅಂಗವಾಗಿ ನವಂಬರ್‌ನಲ್ಲಿ ಪ್ರತಿದಿನ ವಿದ್ಯಾರ್ಥಿಗಳಿಗೆ ಕವಿ, ಲೇಖಕರ ಕೃತಿಗಳ ಪರಿಚಯ ಮಾಡಿಕೊಡುತ್ತಾ ಬರಲಾಗಿದೆ. ಈ ಕಾರ್ಯಕ್ರಮದ ಸುಸಂಪನ್ನವಾಗಿ ನ.29 ರಂದು ಶಾಲೆಯಲ್ಲಿ ಆಯ್ದ 24 ಕವಿಗಳ ಪರಿಚಯ ಕಾರ್ಯಕ್ರಮದ ಜೊತೆಗೆ ಈದಿನ ರಸ ಪ್ರಶ್ನೆ, ಗಮಕವಾಚನ, ಗೀತಗಾಯನ, ಕೃತಿಗಳ ಅನಾವರಣ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಶಾಲಾ ಮುಖ್ಯೋಪಾಧ್ಯಾಯರು ತಿಳಿಸಿದ್ದಾರೆ.

### ವಿದ್ಯಾಸಿರಿ ಯೋಜನೆಗೆ ಅರ್ಜಿ ಆಹ್ವಾನ

▪ ದಾವಣಗೆರೆ

ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ–1 ರ ಅಲೆಮಾರಿ, ಅರೆ ಅಲೆಮಾರಿ ವಿದ್ಯಾರ್ಥಿಗಳಿಂದ ಪ್ರಸಕ್ತ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ, ಶುಲ್ಕ ವಿನಾಯಿತಿ, ಮತ್ತು ವಿದ್ಯಾಸಿರಿ–ಊಟ ಮತ್ತು ವಸತಿ ಸಹಾಯ ಯೋಜನೆ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ವೆಬ್‌ಸೈಟ್ https://ssp.postmatric.karnataka.gov.in ಅಥವಾ https://bcwd.karnataka.gov.in ಮೂಲಕ ಅರ್ಜಿಯನ್ನು 2024 ಜನವರಿ 10 ರೊಳಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂ:8050770005. ಇಮೇಲ್ : bcwdhelpline@gmail.com ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಸಹಾಯವಾಣಿ ಇಮೇಲ್: postmatrichelp@karnataka.gov.in ನ್ನು ಸಂಪರ್ಕಿಸಬಹುದಾಗಿದೆ.

### ಜ್ಯೂಡೋ ಸ್ಪರ್ಧೆ ವಿಜೇತ

▪ ದಾವಣಗೆರೆ



ಇಲ್ಲಿನ ರಾಮನಗರದ ಶಾಂತಿ ನಿಕೇತನ ಪಿಯು ಕಾಲೇಜಿನಲ್ಲಿ ನಡೆದ ಶಾಲಾ ಶಿಕ್ಷಣ ಇಲಾಖೆಯ (ಪ ದ ವಿ ಪ ೂ ರ್ವ) ವಿದ್ಯಾರ್ಥಿಗಳ ರಾಜ್ಯ ಮಟ್ಟದ ಕ್ರೀಡಾಕೂಟ 2023–24ರ ಸಾಲಿನ ಜ್ಯೂಡೋ ಸ್ಪರ್ಧೆಯಲ್ಲಿ ಭಾಗವಹಿಸಿದ ದಾವಣಗೆರೆ ಮೋತಿ ವೀರಪ್ಪ ಕಾಲೇಜಿನ ದ್ವಿತೀಯ ಪಿಯುಸಿ ವಿದ್ಯಾರ್ಥಿ ದೀಪಕ್ ವಿ.ಪಿ. ತೃತೀಯ ಬಹುಮಾನ ಪಡೆದು ದಾವಣಗೆರೆ ಜಿಲ್ಲೆಗೆ ಕೀರ್ತಿ ತಂದಿದ್ದಾರೆ.

### ಗುಣಮಟ್ಟದ ಶಿಕ್ಷಣಕ್ಕೆ ಆದ್ಯತೆ ನೀಡಿ: ಉಪನಿರ್ದೇಶಕ ಕೆ.ರವಿಶಂಕರ್ ರೆಡ್ಡಿ

# ಸಮಾಜ ವಿಜ್ಞಾನ ತರಬೇತಿ ಕಾರ್ಯಾಗಾರ





» ಚಿತ್ರದುರ್ಗ

ಕಳೆದ ವರ್ಷ ಚಿತ್ರದುರ್ಗ ಜಿಲ್ಲೆ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ರಾಜ್ಯಕ್ಕೆ ಪ್ರಥಮ ಸ್ಥಾನ ಗಳಿಸವಲ್ಲಿ ಶಿಕ್ಷಕರು ಹೆಚ್ಚಿನ ಶ್ರಮ ವಹಿಸಿದ್ದರು. ಈ ಬಾರಿಯು ಗುಣಮಟ್ಟ ಶಿಕ್ಷಣಕ್ಕೆ ಆದ್ಯತೆ ನೀಡಿ ಜಿಲ್ಲೆಯು ಉನ್ನತ ಸ್ಥಾನ ಗಳಿಸುವಂತೆ ಮಾಡಬೇಕು ಎಂದು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಕೆ.ರವಿಶಂಕರ್ ರೆಡ್ಡಿ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ, ಜಿಲ್ಲಾ ಮತ್ತು ತಾಲ್ಲೂಕು ಸಮಾಜ ವಿಜ್ಞಾನ ಶಿಕ್ಷಕರ ಕ್ಲಬ್ ಸಂಯುಕ್ತಶ್ರಾಯದಲ್ಲಿ ನಗರದ ತರಾಸು ರಂಗಮಂದಿರದಲ್ಲಿ ಮಂಗಳವಾರ ಆಯೋಜಿಸಿದ್ದ ಸಮಾಜ ವಿಜ್ಞಾನ ಶೈಕ್ಷಣಿಕ ಕಾರ್ಯಗಾರ ಉದ್ಘಾಟಿಸಿ ಅವರು ಮಾತನಾಡಿದರು.ಸ್ಪರ್ಧಾತ್ಮಕ ಪರೀಕ್ಷೆಗಳ ಮಾದರಿಯಲ್ಲಿ ಈ ಬಾರಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯನ್ನು ಜಿಲ್ಲೆಯಲ್ಲಿ ನಡೆಸಬೇಕು. ವಿದ್ಯಾರ್ಥಿಗಳು ಪ್ರತಿಯೊಂದು ವಿಷಯದಲ್ಲೂ ಸಂಪೂರ್ಣ ಹಿಡಿತ ಹೊಂದುವಂತೆ ಬೋದನೆ ನಡೆಸಬೇಕು. ಪರೀಕ್ಷಾ ದೃಷ್ಟಿಯಿಂದ ಮುಖ್ಯ ಎನಿಸುವ ವಿಷಯಗಳಿಗೆಒತ್ತುಕೊಟ್ಟುವಿದ್ಯಾರ್ಥಿಗಳಿಗೆ ಮನನ ಮಾಡಿಸಬೇಕು ಎಂದರು. ಕ್ಷೇತ್ರ ಶಿಕ್ಷಣಾಧಿಕಾರಿ ನಾಗಭೂಷಣ್ ಮಾತನಾಡಿ, ತರಬೇತಿ ಕಾರ್ಯಾಗಾರ ಶಿಕ್ಷಕರಿಗೆ ಉಪಯುಕ್ತವಾಗಿದೆ. ಆರು ವಿಷಯದಲ್ಲಿ ಸಮಾಜ ವಿಜ್ಞಾನ ಪ್ರಮುಖವಾಗಿದೆ. ಸರ್ಕಾರಿ ಶಾಲೆಯ ಮಕ್ಕಳು ಉತ್ತಮ ಫಲಿತಾಂಶ ತರುವಂತೆ ಶಿಕ್ಷಕರು ಹೆಚ್ಚು ಒತ್ತು ನೀಡಬೇಕು ಎಂದರು.

ಬೆಂಗಳೂರಿನ ಸರ್ಕಾರಿ ಪ್ರೌಢ ಶಾಲೆ ಸಹ ಶಿಕ್ಷಕ ವಸಂತ್‌ಶೆಟ್ಟಿ, ಬೆಂಗಳೂರಿನ ಶಾರದಾ ಪಬ್ಲಿಕ್ ಸ್ಕೂಲ್ ಎಂ. ಪ್ರಸಾದ್ ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿ ಸಮಾಜ ವಿಜ್ಞಾನ ಬೋಧನೆ ಕುರಿತು ತರಬೇತಿ ನೀಡಿದರು.ಕಾರ್ಯಾಗಾರದಲ್ಲಿ ಸಮಗ್ರ ಶಿಕ್ಷಣ ಇಲಾಖೆ ಅಧಿಕಾರಿ ಸಿ.ಎಸ್. ವೆಂಕಟೇಶ್ ಆಂಗ್ಲ ಮತ್ತು ಸಮಾಜ ವಿಷಯದ ವಿಷಯ ಪರಿವೀಕ್ಷಕ ಚಂದ್ರಣ್ಣ, ಗಣಿತ ವಿಷಯದ ವಿಷಯ ಪರಿವೀಕ್ಷಕಿ ಸವಿತಾ, ಕನ್ನಡ ಮತ್ತು ಹಿಂದಿ ವಿಷಯದ ವಿಷಯ ಪರಿವೀಕ್ಷಕ ಶಿವಣ್ಣ, ಸಹ ಶಿಕ್ಷಕ ಸಂಘದ ಕಾರ್ಯದರ್ಶಿ ಶ್ರೀನಿವಾಸ್ ಸೇರಿದಂತೆ ಬಸವರಾಜ್, ತಿಪ್ಪೇಸ್ವಾಮಿ, ರಾಜ್‌ಕುಮಾರ್, ವೀರಭದ್ರ ಹಾಗೂ ಸಮಾಜ ವಿಜ್ಞಾನ ವಿಷಯದ ಶಿಕ್ಷಕರು ಇದ್ದರು.




ಚಿತ್ರದುರ್ಗದ ಇಂಡಿಯನ್ ಇಂಟರ್‌ನ್ಯಾಷನಲ್ ಶಾಲೆಯಲ್ಲಿ ಬಿಜೆಪಿ ದಾವಣಗೆರೆ ವಿಭಾಗದ ವತಿಯಿಂದ ನಡೆದ ಪುರಸಭೆ ಹಾಗೂ ಪಟ್ಟಣ ಪಂಚಾಯಿತಿ ಸದಸ್ಯರ ಪ್ರಶಿಕ್ಷಣ ವರ್ಗದ ಎರಡನೇ ಅವಧಿ ಬಿಜೆಪಿ ಬೆಳೆದು ಬಂದ ದಾರಿ ಎಂಬ ವಿಷಯವನ್ನು ನಡೆಸಿಕೊಟ್ಟ ವಿಧಾನ ಪರಿಷತ್ ಮಾಜಿ ಸದಸ್ಯರಾದ ಸಿದ್ದರಾಮಣ್ಣ ಶಿವಮೊಗ್ಗ ಇವರನ್ನು ಬಿಜೆಪಿ ಯುವ ಮುಖಂಡರಾದ ಎಂ.ಸಿ.ರಘುಚಂದನ್ ಅವರು ಗೌರವ ಸಮರ್ಪಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಕಾರ್ಯದರ್ಶಿಗಳಾದ ರೂಪ ವಿನಯ್ ಕುಮಾರ್ ಅವರು ಉಪಸ್ಥಿತರಿದ್ದರು.

## ಹೊಸದುರ್ಗದಲ್ಲಿ ಇಂದು ಉಚಿತ ಕ್ಯಾನ್ಸರ್ ತಪಾಸಣಾ ಶಿಬಿರ ಕಾರ್ಯಕ್ರಮ

» ಹೊಸದುರ್ಗ

ದಾವಣಗೆರೆಯ ಬಾಪೂಜಿ ಕ್ಯಾನ್ಸರ್ ಆಸ್ಪತ್ರೆ ಟ್ರಸ್ಟ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಚಿತ್ರದುರ್ಗ, ಹಾಗೂ ವಿಶ್ವಾರಾಧ್ಯ ಕ್ಯಾನ್ಸರ್ ಆಸ್ಪತ್ರೆ ಮತ್ತು ಸಂಶೋಧನಾ ಸಂಸ್ಥೆ, ತಾಲೂಕು ಸಾರ್ವಜನಿಕ ಆಸ್ಪತ್ರೆ ಹೊಸದುರ್ಗ ವೈದ್ಯರ ಸಹಕಾರದಲ್ಲಿ ಉಚಿತ ಕ್ಯಾನ್ಸರ್ ಆರೋಗ್ಯ ತಪಾಸಣಾ ಶಿಬಿರವನ್ನು ನ.29 ರಂದು ಬುಧವಾರ ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 3 ಗಂಟೆಯವರೆಗೆ ಪಟ್ಟಣದ ಸರ್ಕಾರಿ ಆಸ್ಪತ್ರೆಯ ಅವರಣದಲ್ಲಿ ಆಯೋಜಿಸಲಾಗಿದೆ ಎಂದು ಮಾರ್ಕೆಟಿಂಗ್ ವ್ಯವಸ್ಥಾಪಕ .ಜಿ. ಆರ್.ಸಂತೋಷ್‌ಕುಮಾರ್ ತಿಳಿಸಿದ್ದಾರೆ.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಮಂಗಳವಾರ ಸುದ್ದಿಗೋಷ್ಟಿಯನ್ನುದ್ದೇಶಿ ಮಾತನಾಡಿದ ಅವರು ಸಾರ್ವಜನಿಕರು ಇದರ ಸಂಪೂರ್ಣ ಸದುಪಯೋಗ ಪಡೆದುಕೊಳ್ಳಬೇಕು ಎಂದು ಮನವಿ ಮಾಡಿದರು.

ಯಾಂತ್ರೀಕೃತ ಜೀವನದಿಂದಾಗಿ ಸಾರ್ವಜನಿಕರಲ್ಲಿ ಆರೋಗ್ಯ ಕಾಳಜಿ ತೀರಾ ಕಡಿಮೆಯಾಗುತ್ತಿದೆ. ಇಂದಿನ ಒತ್ತಡದ ಜೀವನದಲ್ಲಿ ಪ್ರತಿಯೊಬರೂ ಸಹಾ ಸಲುಕಿಕೊಂಡಿದ್ದು ಅದರಿಂದ ಹೊರಬಂದು ಆರೋಗ್ಯದ ಬಗ್ಗೆ ಕಾಳಜಿ ಕೊಡಬೇಕಿದೆ ಎಂದು ಸಲಹೆ ನೀಡಿದ ಅವರು ಕ್ಯಾನ್ಸರ್‌ನಂತಹ ರೋಗಗಳು ಜನರ ಜೀವವನ್ನ ತೀರ್ವವಾಗಿ ಕಾಡುತ್ತಿವೆ,ಆದ್ದರಿಂದ ಸಾರ್ವಜನಿಕರು ನಿಯಮಿತವಾದ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳುವ ಮೂಲಕ ಆದಷ್ಟು ಬೇಗನೆ ರೋಗವನ್ನು ಕಂಡುಕೊಂಡು ಚಿಕಿತ್ಸೆ ಪಡೆದು ಗುಣಮುಖರಾಗಬೇಕೆಂದು ಅವರು ಸಲಹೆ ನೀಡಿದ್ದಾರೆ.

## ಪ್ರಾಂಶುಪಾಲರಿಂದ ಅನುಚಿತ ವರ್ತನೆ: ಅಮಾನತ್ತಿಗೆ ಆಗ್ರಹ




» ಚಿತ್ರದುರ್ಗ

ಸರ್ಕಾರಿ ಬಾಲಕಿಯರ ಪ.ಪೂ.ಕಾಲೇಜು, ಪ್ರಾಂಶುಪಾಲರು ಇದೇ ಕಾಲೇಜಿನಲ್ಲಿ ಇದ್ದುಕೊಂಡು ಬಾರಿ ಅಕ್ರಮ, ಲೈಂಗಿಕ ದೌರ್ಜನ್ಯದಂತಹ ಪ್ರಕರಣಗಳನ್ನು ಎಗ್ಗಿಲ್ಲದೇ ನಡೆಸುತ್ತಿದ್ದು, ಇಂತಹ ಅಧಿಕಾರಿಯ ದುರ್ನಡತೆ, ಅಪ್ರಮಾಣಿಕ ಪ್ರಾಂಶುಪಾಲರಾದ ನಾಗರಾಜ್ ಇವರನ್ನು ಕೂಡಲೇ ಅಮಾನತ್ತು ಮಾಡಿ, ಬೇರೆಡೆ ವರ್ಗಾವಣೆ ಮಾಡಿ, ಈ ವಿಚಾರದ ಬಗ್ಗೆ ತುರ್ತಾಗಿ ತನಿಖೆ ನಡೆಸಲು ಕ್ರಮ ಕೈಗೊಳ್ಳುವಂತೆ ಕರುನಾಡ ವಿಜಯಸೇನೆ ಜಿಲ್ಲಾ ಸಮಿತಿ ಪ್ರತಿಭಟನೆ ಮೂಲಕ ಒತ್ತಾಯ ಜಿಲ್ಲಾಡಳಿತದ ಮೂಲಕ ಶಾಲಾ ಶಿಕ್ಷಣ ಇಲಾಖೆಯ ನಿರ್ದೇಶಕರನ್ನು ಒತ್ತಾಯಿಸಿದೆ.

ಕರುನಾಡ ವಿಜಯಸೇನೆ ಜಿಲ್ಲಾಧ್ಯಕ್ಷರಾದ ಕೆ.ಟಿ.ಶಿವಕುಮಾರ್ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ಮಾತನಾಡಿದ ಅವರು, ಚಿತ್ರದುರ್ಗ ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜುನ ಪ್ರಾಂಶುಪಾಲರಾದ ನಾಗರಾಜ್ ಇವರು ಸುಮಾರು ವರ್ಷಗಳಿಂದ ಅಕ್ರಮ ಚಟುವಟಿಕೆಗಳನ್ನು ಮಾಡಿಕೊಂಡು ಬಂದಿದ್ದು, ಇವರಿಂದ ವಿದ್ಯಾರ್ಥಿಗಳಿಗೆ ಉತ್ತಮವಾದ ವಾತಾವರಣ, ಪಾಠ ಪ್ರವಚನ ಮತ್ತು ವಿದ್ಯಾರ್ಥಿಗಳಿಗೆ ಭದ್ರತೆ ಇಲ್ಲದೇ ಇರುವ ಬಗ್ಗೆ ಇವರನ್ನು ಕೂಡಲೇ ಅಮಾನತ್ತು ಮಾಡಬೇಕು, ಮನೆ ಪಾಠಕ್ಕೆ ಬರಲೊಪ್ಪದ ವಿದ್ಯಾರ್ಥಿನಿಯರಿಗೆ ಬೆದರಿಕೆ ಹಾಕಿರುವ ಮತ್ತು ಕಾಲೇಜಿನಲ್ಲಿಯೇ ಪಾಠ ಮಾಡುತ್ತೇನೆಂದು ಹೇಳಿ ಬೋವಿ ಹಾಸ್ಟೆಲ್‌ನಲ್ಲಿ ಪಾಠ ಮಾಡುತ್ತೇನೆಂದು ಭಯ ಹುಟ್ಟಿಸುತ್ತಾರೆ. ಮನೆ ಪಾಠಕ್ಕೆ ಬರದಿದ್ದರೆ ಮಕ್ಕಳನ್ನು ಫೇಲ್ ಮಾಡುತ್ತೇನೆ ಹಾಗೂ ಪ್ರಾಕ್ಟಿಕಲ್ ಮಾರ್ಕ್ಸ್ ಕೊಡುವುದಿಲ್ಲ ಎಂದು ಹೆದರಿಸಿರುವುದು. ಇವರ ತಾಳಕ್ಕೆ ಮಕ್ಕಳು ಒಪ್ಪದೇ ಇರುವ ಮಕ್ಕಳನ್ನು ಉದ್ದೇಶಪೂರ್ವಕವಾಗಿ ಪರೀಕ್ಷೆ ಚೆನ್ನಾಗಿ ಬರೆದರೂ ಸಹ ಫೇಲು ಮಾಡಿರುತ್ತಾರೆ ಎಂದು ದೂರಿದ್ದಾರೆ.

ಪಿ.ಯು. ಉಪನಿರ್ದೇಶಕರು ಮತ್ತು ಜಿಲ್ಲಾಧಿಕಾರಿಗಳ ಅನುಮತಿ ಇಲ್ಲದೇ ಕಾಲೇಜಿನ ಪ್ರಾಂಶುಪಾಲರು ಜಾನ್ಸ್ ಮೈನ್ಸ್‌ನವರ ಜೊತೆ ಒಳ ಒಪ್ಪಂದ ಮಾಡಿಕೊಂಡು 200 ಕ್ಕೂ ಹೆಚ್ಚು ಮಕ್ಕಳನ್ನು ಕಾಲೇಜಿನಿಂದ ಹೊರಗಡ ಕರೆದುಕೊಂಡು ಹೋಗಿದ್ದು, ಈ ಬಗ್ಗೆ ತನಿಖೆ ಮಾಡಬೇಕು. ರಸ್ತೆ ಅಗಲೀಕರಣಕ್ಕೆ ಸಂಭಂಧಿಸಿದ ಕಾಲೇಜಿನ ಕಾಂಪೌಂಡ್ ತೆರವುಗೊಳಿಸಿದ್ದು, ಕಾಂಪೌಂಡ್ ಸೈಜುಗಲ್ಲು, ತ್ಯಾಗದ ಮರಗಳು ಕಾಣೆಯಾಗಿದ್ದು, ಇವುಗಳನ್ನು ಮಾರಾಟ ಮಾಡಿಕೊಂಡಿರುವುದು ಮೇಲ್ನೋಟಕ್ಕೆ ಕಂಡುಬಂದಿರುತ್ತದೆ. ನಮ್ಮ ಸಂಘಟನೆಯ ಪದಾಧಿಕಾರಿಗಳು ಸೈಜುಗಲ್ಲು, ತ್ಯಾಗದ ಮರಗಳ ಬಗ್ಗೆ ಕೇಳಿದಾಗ ನಮ್ಮ ಮೇಲೆ ಪ್ರಾಂಶುಪಾಲರಾದ ನಾಗರಾಜ್ ಅವಾಚ್ಯ ಶಬ್ದಗಳಿಂದ ಬೈದು ಸಾರ್ವಜನಿಕರ ಎದುರು ಕಾಲೇಜಿನಿಂದ ಹೊರಹಾಕಲು ಪ್ರಯತ್ನಿಸಿ, ದೌರ್ಜನ್ಯ ಮಾಡಿರುತ್ತಾರೆ. ಹಾಗೂ ಕರುನಾಡ ವಿಜಯಸೇನೆಗೆ ಕೋತಿ ಸೇನೆ ಎಂದು ಅವಮಾನಿಸಿರುತ್ತಾರೆ. ಪ್ರಾಂಶುಪಾಲರು ಕಾಲೇಜಿನ ಉಪನ್ಯಾಸಕರ ಮೇಲೆ ಲೈಂಗಿಕ ದೌರ್ಜನ್ಯ ಎಸಗಿರುವುದಲ್ಲದೇ ಹೆದರಿಸಿರುವ ಬಗ್ಗೆ ದೂರು ದಾಖಲಾಗಿರುತ್ತದೆ, ಸದರಿ ಕೆಲವು ವಿಚಾರ ಬಗ್ಗೆ ಮಲ್ಲೇಶ್ವರಂನ ಪಿ.ಯು. ಬೋರ್ಡ್‌ನಲ್ಲಿ ತನಿಖೆ ಸಹ ನಡೆಯುತ್ತಿರುತ್ತದೆ ಎಂದಿದ್ದಾರೆ.

ಈ ಪ್ರತಿಭಟನೆಯಲ್ಲಿ ಕರುನಾಡ ವಿಜಯಸೇನೆಯ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಗೋಪಿನಾಥ್, ಜಿಲ್ಲಾ ಕಾರ್ಯದರ್ಶಿ ಜಗದೀಶ್, ಜಿಲ್ಲಾ ಉಪಾಧ್ಯಕ್ಷರಾದವ ರತ್ನಮ್ಮ, ತಾಲ್ಲೂಕು ಅಧ್ಯಕ್ಷರಾದ ಸುರೇಶ್, ವಿದ್ಯಾರ್ಥಿ ಘಟಕದ ಅಧ್ಯಕ್ಷರಾದ ಅಖಿಲೇಶ್, ಮಹಮ್ಮದ್ ರಫಿ, ಶಾನ್ ಸೇರಿದಂತೆ ಇತರರು ಭಾಗವಹಿಸಿದ್ದರು.

**ಪ್ರಮುಖ ಸುದ್ದಿ**

# ಕನಕದಾಸ ಜಯಂತಿ: ಐವರಿಗೆ ಕನಕಶ್ರೀ ಪ್ರಶಸ್ತಿ ಗೌರವ

» ಚಿತ್ರದುರ್ಗ

ಇದೇ 30 ರಂದು ಜಿಲ್ಲಾಡಳಿತದ ವತಿಯಿಂದ ಹಮ್ಮಿಕೊಂಡಿರುವ ಕನಕದಾಸ ಜಯಂತಿ ಕಾರ್ಯಕ್ರಮದಲ್ಲಿ ಜಿಲ್ಲಾ ಕುರುಬರ ಸಂಘವು ಪಾಲ್ಗೊಂಡು ಅದ್ದೂರಿಯಾಗಿ ಆಚರಿಸಲು ನಗರವನ್ನು ವಿದ್ಯುತ್ ಅಲಂಕರಾದಿಂದ ಸಿಂಗರಿಸುವ ಮೂಲಕ ಸಕಲ ಸಿದ್ಧತೆ ಮಾಡಲಾಗಿದೆ ಎಂದು ಸಂಘದ ಜಿಲ್ಲಾಧ್ಯಕ್ಷ ಎಸ್.ಶ್ರೀರಾಮ್ ಹೇಳಿದ್ದಾರೆ.



ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕನಕದಾಸರ ಕೇವಲ ಕುರುಬ ಸಮಾಜಕ್ಕೆ ಸೀಮಿತವಾದವರಲ್ಲ. ಎಲ್ಲಾ ಸಮಾಜಕ್ಕೂ ಮಾರ್ಗದರ್ಶಕರಾದ ಮಹಾನ್ ವ್ಯಕ್ತಿ. ಅವರ ಕೀರ್ತನೆಗಳಿಂದ ಸಕಲ ಸಮಾಜವನ್ನು ತಿದ್ದುವ ಕಾರ್ಯ ಮಾಡಿದ್ದಾರೆ. ಅಂತಹ ಮಹಾನ್ ವ್ಯಕ್ತಿಯ ಜಯಂತಿಯನ್ನು ಎಲ್ಲಾ ಸಮುದಾಯಗಳ ಜನರು ಸೇರಿಕೊಂಡು ಆಚರಣೆ ಮಾಡಬೇಕಿದೆ. ಇದಕ್ಕಾಗಿ ಎಲ್ಲಾ ವರ್ಗದ ಜನರನ್ನು ಕಾರ್ಯಕ್ರಮಕ್ಕೆ ಆಹ್ವಾನ ನೀಡಲಾಗಿದೆ. ಅದೇ ರೀತಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಹಾಗೂ ಜನಸೇವೆ ಮಾಡಿರುವಂತಹ ಆರೋಗ್ಯ ಇಲಾಖೆಯ ಮಲ್ಲಣ್ಣ, ಸಮಾಜ ಸೇವಕರಾದ ದುರುಗೇಶಪ್ಪ, ಮಹ್ಮದ್ ನೂರುಲ್ಲಾ, ಸಿದ್ದೇಶ್ ಜೋಗಿ, ದೀಪು ಅವರಿಗೆ ಕನಕ ಶ್ರೀ ಪ್ರಶಸ್ತಿಯನ್ನು ನೀಡಲಾಗುತ್ತಿದೆ ಎಂದರು.

ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಿ.ಟಿ.ಜಗದೀಶ್ ಮಾತನಾಡಿ, ರಾಜ್ಯ ಸರ್ಕಾರ ಶಾಶ್ವತ ಹಿಂದುಳಿದ ಆಯೋಗ ಕಾಂತರಾಜ್ ನೇತೃತ್ವದಲ್ಲಿ ನಡೆಸಿರುವ ಶೈಕ್ಷಣಿಕ, ಸಮಾಜಿಕ ಹಾಗೂ ಆರ್ಥಿಕ ಸಮೀಕ್ಷಾ ವರದಿಯನ್ನು ಸ್ವೀಕರಿಸಿ, ಅಂಗೀಕರಿಸಬೇಕು ಎಂದು ಒತ್ತಾಯಿಸಿದರು.

ಕನಕ ಜಯಂತಿ ಅಂಗವಾಗಿ 29 ರಂದು ಬೆಳಗ್ಗೆ 9.30 ಕ್ಕೆ ಬೈಕ್ ರ‍್ಯಾಲಿ ನಡೆಸಲಾಗುವುದು. 30 ರಂದು ಕನಕದಾಸರ ಪ್ರತಿಮೆಯೊಂದಿಗೆ ನಗರದ ಪ್ರಮುಖ ಬೀದಿಯಲ್ಲಿ ಅದ್ದೂರಿ ಮೆರವಣಿಗೆ ಮಾಡಲಾಗುವುದು ಎಂದು ಹೇಳಿದ ಅವರು, ಕಾರ್ಯಕ್ರಮದಲ್ಲಿ ಸಮಾಜದ ಸಾಧಕರಾದ ನಿಶಾನಿ ಎಂ.ಜಯ್ಯಣ್ಣ, ವೈದ್ಯರಾದ ಡಾ.ದೇವರಾಜ್, ಚತ್ತಿಸ್‌ಘಡದ ಶರತ್ ಬಿ.ಶ್ರೀನಿವಾಸ್ ಕೋರಿ, ಕೃಷಿ ಕ್ಷೇತ್ರದಲ್ಲಿ ಬಿ.ಹೆಚ್.ಹನುಮಂತಪ್ಪ ಗೌಡ, ಎಂ.ಕಾಂ.ನಲ್ಲಿ ಬಂಗಾರದ ಪದಕ ಪಡೆದಿರುವ ಚೈತನ್ಯ ಸಿ.ಎಂ. ಅವರನ್ನು ಸನ್ಮಾನಿಸಿ ಗೌರವಿಸಲಾಗುವುದು ಎಂದರು.

ಸಂಜೆ 6.30 ಕ್ಕೆ ಕನಕ ವೃತ್ತದಲ್ಲಿ ಜೀಕನ್ನಡ ವಾಹಿನಿಯ ಕಲಾವಿದರಿಂದ ರಸಮಂಜರಿ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ತಿಳಿಸಿದರು.ಪತ್ರಿಕಾಗೋಷ್ಠಿಯಲ್ಲಿ ನಗರಸಭೆ ಮಾಜಿ ಅಧ್ಯಕ್ಷ ಹೆಚ್.ಮಂಜಪ್ಪ, ಮಾಜಿ ಸದಸ್ಯ ರವಿಶಂಕರ್ ಬಾಬು, ತಾಲ್ಲೂಕು ಘಟಕದ ಅಧ್ಯಕ್ಷ ಕೆ.ಓಂಕಾರಪ್ಪ, ಮಲ್ಲಿಕಾರ್ಜುನ್, ಪುಷ್ಪವಲ್ಲಿ, ರಾಜ್ಯ ಸಂಘದ ಉಪಾಧ್ಯಕ್ಷರಾದ ಲೇಪಾಕ್ಷಿ, ನಿಶಾನಿ ಶಂಕರ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಫಾಸ್ಟ್ ನ್ಯೂಸ್

## ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯಿಂದ ೩ ದಿನದ ರಾಷ್ಟ್ರೀಯ ಕಾರ್ಯಗಾರ

» ದಾವಣಗೆರೆ

ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ವತಿಯಿಂದ ಡಿ.6 ರಿಂದ 8ರ ವರೆಗೆ ಬೆಂಗಳೂರಿನ ವಿದ್ಯಾರಣ್ಯಪುರದಲ್ಲಿರುವ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ, ಜಿ.ಕೆ.ವಿ.ಕೆ ಆವರಣದಲ್ಲಿ ಬೇಸಿಕ್ಸ್ ಅಂಡ್ ರಿಯಲ್–ವರ್ಡ್ ಅಪ್ಲಿಕೇಶನ್ಸ್ ಆಫ್ ಯುಎವಿ ಅಂಡ್ ಡ್ರೋನ್ಸ್(Basics and Real-world Applications of UAVs and Drones) ವಿಷಯದ ಕುರಿತು ರಾಷ್ಟ್ರೀಯ ಕಾರ್ಯಗಾರವನ್ನು ಹಮ್ಮಿಕೊಳ್ಳಲಾಗಿದೆ. ಕಾರ್ಯಾಗಾರದಲ್ಲಿ 35 ವರ್ಷ ಮೀರದ ಪದವಿ, ಸ್ನಾತಕೋತ್ತರ, ಡಿಪ್ಲೋಮಾ ಹಾಗೂ ಇಂಜಿನಿಯರಿಂಗ್ ವಿದ್ಯಾರ್ಥಿಗಳು ಭಾಗವಹಿಸಲು ಅವಕಾಶ ಕಲ್ಪಿಸಲಾಗಿದೆ. ಆಸಕ್ತ ವಿದ್ಯಾರ್ಥಿಗಳು ಡಿಸೆಂಬರ್ 2 ರೊಳಗಾಗಿ ವೆಬ್‌ಸೈಟ್ https://forms.gle/fBWXpnoczCTd3ZDFA ನಲ್ಲಿ ಭರ್ತಿ ಮಾಡಿ ನೋಂದಾಯಿಸಿಕೊಳ್ಳಬೇಕು. ಹೆಚ್ಚಿನ ವಿವರಗಳಿಗೆ ವೈಜ್ಞಾನಿಕ ಅಧಿಕಾರಿ(ಮೊ: 9743084194) ಅಥವಾ ಅಕಾಡೆಮಿಯ ವೆಬ್ ಸೈಟ್ www.kstacademy.in ಸಂಪರ್ಕಿಸಲು ಅಕಾಡೆಮಿ ಕಾರ್ಯನಿರ್ವಾಹಕ ಅಧಿಕಾರಿ ಎ.ಎಂ ರಮೇಶ್ ತಿಳಿಸಿದ್ದಾರೆ.

## ಮಹಿಳೆಯರಿಂದ ಸಹಾಯಧನ ಮತ್ತು ಸಾಲ ಸೌಲಭ್ಯಕ್ಕೆ ಅರ್ಜಿ ಆಹ್ವಾನ

» ದಾವಣಗೆರೆ

ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವತಿಯಿಂದ ಪ್ರಸಕ್ತ ಸಾಲಿನಲ್ಲಿ ಮಹಿಳೆಯರಿಗೆ ಸ್ವ ಉದ್ಯೋಗಕ್ಕಾಗಿ ಸಹಾಯಧನ ಮತ್ತು ಸಾಲ ಸೌಲಭ್ಯ ನೀಡಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಯೋಜನೆಗಳ ವಿವರ: ಉದ್ಯೋಗಿನಿ ಯೋಜನೆಯಡಿ 18–55 ವಯಸ್ಸಿನೊಳಗಿನ ಮಹಿಳೆಯರು ಆದಾಯೋತ್ಪನ್ನ ಚಟುವಟಿಕೆ ಕೈಗೊಳ್ಳಲು ರೂ.1,00,000 ರಿಂದ 3,00,000/–ಗಳವರೆಗೆ ಬ್ಯಾಂಕ್ ಸಾಲ ಹಾಗೂ ಸಹಾಯಧನ ನೀಡಲಾಗುವುದು. ಚೇತನ, ಯೋಜನೆಯಡಿ 18 ವರ್ಷ ಮೇಲ್ಪಟ್ಟ ದಮನಿತ ಮಹಿಳೆಯರಿಗೆ, ಧನಶ್ರೀ ಯೋಜನೆಯಡಿ 18 ರಿಂದ 60 ವರ್ಷದೊಳಗಿನ ಹೆಚ್.ಐ.ವಿ. ಸೋಂಕಿತ ಮಹಿಳೆಯರಿಗೆ, ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆಯಡಿ 18 ರಿಂದ 60 ವರ್ಷದೊಳಗಿನ ಲಿಂಗತ್ವ ಅಲ್ಪ ಸಂಖ್ಯಾತರಿಗೆ (ಟ್ರಾನ್ಸ್ ಜೆಂಡರ್) ಹಾಗೂ ಮಾಜಿ ದೇವದಾಸಿ ಮಹಿಳೆಯರ ಪುನರ್ವಸತಿ ಯೋಜನೆಯಡಿ 2007–08 ರ ಸಮೀಕ್ಷೆಯಲ್ಲಿ ಗುರುತಿಸಿರುವ ಮಾಜಿ ದೇವದಾಸಿ ಮಹಿಳೆಯರಿಗೆ ಆದಾಯೋತ್ಪನ್ನ ಚಟುವಟಿಕೆ ಕೈಗೊಳ್ಳಲು ರೂ.30000/–ಗಳ ಪ್ರೋತ್ಸಾಹಧನ ನೀಡಲಾಗುತ್ತದೆ. ಅರ್ಹ ಅಭ್ಯರ್ಥಿಗಳು ಯೋಜನೆಗಳಿಗೆ ಹತ್ತಿರದ ಬಾಪೂಜಿ ಸೇವಾ ಕೇಂದ್ರ ಗ್ರಾಮ ಒನ್, ಬೆಂಗಳೂರು ಒನ್, ಕರ್ನಾಟಕ ಒನ್ ಕೇಂದ್ರಗಳಲ್ಲಿ ಸೇವಾ ಸಿಂಧು ಪೋರ್ಟಲ್ https://sevasindhu.karnataka.gov.in ಮೂಲಕ ಅರ್ಜಿ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ಡಿಸೆಂಬರ್ 22 ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಆಯಾ ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿ ಹಾಗೂ ಉಪನಿರ್ದೇಶಕರ ಕಛೇರಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ., ಎಂ.ಸಿ.ಸಿ. "ಬಿ" ಬ್ಲಾಕ್, ಕುವೆಂಪು ನಗರ, 14 ನೇ ಮುಖ್ಯ ರಸ್ತೆ, ದಾವಣಗೆರೆ ಇಲ್ಲಿಗೆ ಸಂಪರ್ಕಿಸಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ. ಉಪನಿರ್ದೇಶಕಿ ವಾಸಂತಿ ಉಪ್ಪಾರ್ ತಿಳಿಸಿದ್ದಾರೆ.

## ಡಿಸೆಂಬರ್ 1: ರಂದು ವಿಶ್ವ ಏಡ್ಸ್ ದಿನಾಚರಣೆ

» ದಾವಣಗೆರೆ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕು.ಕ.ಇಲಾಖೆ, ಜಿಲ್ಲಾ ಏಡ್ಸ್ ಪ್ರತಿಬಂಧಕ ಮತ್ತು ನಿಯಂತ್ರಣ ಘಟಕ, ಜಿಲ್ಲಾ ಎನ್.ಸಿ.ಸಿ. ಮತ್ತು ಎನ್.ಎಸ್.ಎಸ್, ಜಿಲ್ಲೆಯ ಎಲ್ಲಾ ಆರ್.ಆರ್.ಸಿ ಕಾಲೇಜುಗಳು ಮತ್ತು ಸ್ವಯಂ ಸೇವಾ ಸಂಸ್ಥೆಗಳ ಸಹಯೋಗದೊಂದಿಗೆ ಡಿಸೆಂಬರ್ 1 ರಂದು ಬೆಳಗ್ಗೆ 11 ಗಂಟೆಗೆ ಎ.ವಿ. ಕಮಲಮ್ಮ ಮಹಾವಿದ್ಯಾಲಯದಲ್ಲಿ ಜಿಲ್ಲಾ ಮಟ್ಟದ ವಿಶ್ವ ಏಡ್ಸ್ ದಿನಾಚರಣೆ ಹಮ್ಮಿಕೊಳ್ಳಲಾಗಿದೆ. ಜಾಥಾ: ಬೆಳಗ್ಗೆ 9 ಗಂಟೆಗೆ ಚಿಗಟೇರಿ ಜಿಲ್ಲಾ ಆಸ್ಪತ್ರೆ ಮುಂಭಾಗದಿಂದ ಜಾಥಾ ಕಾರ್ಯಕ್ರಮ ಆರಂಭವಾಗುತ್ತದೆ. ಅದೇ ದಿನ ಸಂಜೆ 6 ಗಂಟೆಗೆ ನಗರದ ರಾಂ & ಕೋ ವೃತ್ತದಲ್ಲಿ ಏಡ್ಸ್‌ನಿಂದ ಮರಣ ಹೊಂದಿದವರಿಗೆ ಶ್ರದ್ಧಾಂಜಲಿ ಅರ್ಪಿಸುವ ಸಲುವಾಗಿ ಕ್ಯಾಂಡಲ್ ಲೈಟ್ ಸ್ಮರಣ ಕಾರ್ಯಕ್ರಮ ಆಯೋಜಿಸಲಾಗಿದೆ.

## ಪ್ರತಿಭಾ ಕಾರಂಜಿ

» ದಾವಣಗೆರೆ

ದಾವಣಗೆರೆ ದಕ್ಷಿಣ ವಲಯ ವ್ಯಾಪ್ತಿಯ ಬಾಡಾ ಕ್ರಾಸ್ ಹತ್ತಿರದ ಜೈನ್ ಪಬ್ಲಿಕ್ ಶಾಲೆಯಲ್ಲಿ ನ. 29 ರಂದು ಬೆಳಿಗ್ಗೆ 10 ಗಂಟೆಗೆ ಪ್ರಸಕ್ತ ಸಾಲಿನ ಬ್ಲಾಕ್ ಹಂತದ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿಯಲ್ಲಿ ಪ್ರಥಮ ಸ್ಥಾನ ಪಡೆದ ಸ್ಪರ್ಧಾತಿಗಳು ಭಾಗವಹಿಸಬೇಕು ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಕ್ಷೇತ್ರ ಶಿಕ್ಷಣಾಧಿಕಾರಿ ತಿಳಿಸಿದ್ದಾರೆ.

# ಜನನ–ಮರಣ ಪ್ರಕರಣ: ಕಡ್ಡಾಯವಾಗಿ ಇ–ಜನ್ಮ ತಂತ್ರಾಂಶದಲ್ಲಿ ನೋಂದಾಯಿಸಿ

» ದಾವಣಗೆರೆ



ಜಿಲ್ಲೆಯಲ್ಲಿನ ಜನನ ಹಾಗೂ ಮರಣ ನೋಂದಣಿಯನ್ನು ಕಡ್ಡಾಯವಾಗಿ ಇ–ಜನ್ಮ ತಂತ್ರಾಂಶದಲ್ಲಿ ದಾಖಲಿಸಬೇಕು, ನೊಂದಣಿಗೆ ಬಾಕಿ ಇರುವ ಪ್ರಕರಣಗಳನ್ನು ಇತ್ಯರ್ಥಪಡಿಸಲು ಅಭಿಯಾನದಡಿ ಒಂದು ದಿನ ನಿಗಧಿ ಮಾಡಿ ನೊಂದಣಿಗೆ ಕ್ರಮವಹಿಸಬೇಕೆಂದು ಜಿಲ್ಲಾಧಿಕಾರಿ ಡಾ. ವೆಂಕಟೇಶ್ ಎಂ.ವಿ ಅಧಿಕಾರಿಗಳಿಗೆ ಸೂಚಿಸಿದರು.

ಸೋಮವಾರ ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ನಾಗರೀಕ ನೋಂದಣಿ ಪದ್ಧತಿ ಹಾಗೂ ಕೃಷಿ ಅಂಕಿ ಅಂಶಗಳ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪ್ರಸಕ್ತ 2023 ರ ಸಾಲಿನ ಜನವರಿಯಿಂದ ಅಕ್ಟೋಬರ್ ವರೆಗೆ ಜನನ ಅಂಕಿ ಅಂಶದಲ್ಲಿ 12601 ಗಂಡು, 11830 ಹೆಣ್ಣು ಸೇರಿ 24998 ಜನನ ಪ್ರಕರಣಗಳಿವೆ. ಮರಣ ಪ್ರಕರಣಗಳಲ್ಲಿ ಇದೇ ಅವಧಿಯಲ್ಲಿ 7951 ಗಂಡು, 5678 ಹೆಣ್ಣು ಸೇರಿ 13629 ಮರಣ ಪ್ರಕರಣಗಳು ಜಿಲ್ಲೆಯಲ್ಲಿ ಜರುಗಿದೆ. ಜನನ ಹಾಗೂ ಮರಣಗಳ ಅಂಕಿ ಅಂಶಗಳನ್ನು ಇ–ಜನ್ಮ ತಂತ್ರಾಂಶದಲ್ಲಿ ನೋಂದಾಯಿಸಲಾಗಿದ್ದು, 2015 ರಿಂದ 2021 ರ ವರೆಗೆ 3689 ಜನನ ಪ್ರಕರಣಗಳು, 1427 ಮರಣದ ಪ್ರಕರಣಗಳು ಸೇರಿ 5116 ನೋಂದಣಿಯಾಗದ ಪ್ರಕಾರಣಗಳನ್ನು ಶೀಘ್ರವೇ ಅಭಿಯಾನದ ಮೂಲಕ ಇತ್ಯರ್ಥ ಮಾಡಿ ಇ–ಜನ್ಮ ತಂತ್ರಾಂಶದಲ್ಲಿ ನೋಂದಣಿಗೆ ಅಧಿಕಾರಿಗಳು ಕ್ರಮವಹಿಸಬೇಕು. ಗ್ರಾಮೀಣ ಪ್ರದೇಶದಲ್ಲಿ ಗ್ರಾಮಲೆಕ್ಕಿಗರು, ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳು ಜನನ, ಮರಣ ನೊಂದಣಿ ಪ್ರಾಧಿಕಾರವಾಗಿದ್ದು ನಗರ, ಪಟ್ಟಣ ಪ್ರದೇಶದಲ್ಲಿ ಮುಖ್ಯಾಧಿಕಾರಿ, ಆಯುಕ್ತರು ಪ್ರಾಧಿಕಾರವಾಗಿರುತ್ತಾರೆ.

ಆಶಾ ಹಾಗೂ ಅಂಗನವಾಡಿ ಕಾರ್ಯಕರ್ತೆಯರು ಮನೆ ಮನೆಗೂ ತೆರಳಿ ಜನನ, ಮರಣದ ಸಂಪೂರ್ಣ ಮಾಹಿತಿಯನ್ನು ಪಡೆದು ನೊಂದಣಿ ಕಾರ್ಯದಲ್ಲಿ ಕಡ್ಡಾಯವಾಗಿ ಭಾಗವಹಿಸಿ ನೂರರಷ್ಟು ಗುರಿ ಸಾಧಿಸಬೇಕು. ಸರ್ಕಾರಿ ಹಾಗೂ ಖಾಸಗಿ ಆಸ್ಪತ್ರೆಗಳಲ್ಲಿ ಮರಣ ಹೊಂದಿದವರ ಮರಣ ಪ್ರಮಾಣ ಪತ್ರ ಪಡೆಯಲು 4 ಮತ್ತು 4.ಎ ಅರ್ಜಿಯನ್ನು ಭರ್ತಿ ಮಾಡಿ, ವೈದ್ಯಕೀಯ ಪ್ರಮಾಣ ಪತ್ರ ಪಡೆದು ಇ–ಜನ್ಮ ತಂತ್ರಾಂಶದಲ್ಲಿ ನೋಂದಾಯಿಸಬೇಕು. ಜನನ–ಮರಣ ದರ; 2022 ರಲ್ಲಿ ಜನನ ಮತ್ತು ಮರಣ ದರ 1000 ಕ್ಕೆ ಜಿಲ್ಲೆಯ ಗ್ರಾಮಾಂತರ ಪ್ರದೇಶದಲ್ಲಿ 11.61, ನಗರ ಪ್ರದೇಶದಲ್ಲಿ 22.52 ಸೇರಿದಂತೆ ಒಟ್ಟು ಜನನ ದರ 15.30 ಹಾಗೂ ಮರಣ ದರ ಗ್ರಾಮೀಣ 7.71, ನಗರ ಪ್ರದೇಶ 7.55 ಸೇರಿ ಒಟ್ಟು 7.66 ರಷ್ಟಿದ್ದು, ಗ್ರಾಮೀಣ ಭಾಗದಲ್ಲಿ ಮರಣ ಪ್ರಮಾಣ ಹೆಚ್ಚಾಗುತ್ತಿದ್ದು ಆರೋಗ್ಯ ಇಲಾಖೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದರು.

ನೋಂದಣಿ ಕುರಿತಂತೆ ಜನರಲ್ಲಿ ಅರಿವು ಮೂಡಿಸಿ ಕೂಲಂಕುಶವಾಗಿ ಪರಿಶೀಲನೆ ನಡೆಸಿ, ಜನನ ಹಾಗೂ ಮರಣ ಪ್ರಮಾಣ ಪತ್ರಗಳು ಸುಲಭವಾಗಿ ಸಿಗುವಂತೆ ನೋಡಿಕೊಳ್ಳಬೇಕು.

ಜಿಲ್ಲೆಯಲ್ಲಿ ಗ್ರಾಮೀಣ ಪ್ರದೇಶದಲ್ಲಿ 916 ನೊಂದಣಿ ಘಟಕಗಳು, ನಗರ ಪ್ರದೇಶದಲ್ಲಿ 20 ಸೇರಿದಂತೆ ಒಟ್ಟು 936 ನೊಂದಣಿ ಘಟಕಗಳಿರುತ್ತವೆ.

ಪ್ರಸಕ್ತ ಸಾಲಿನಲ್ಲಿ ಮಳೆಯ ಕೊರತೆಯಿಂದಾಗಿ ಮುಂಗಾರು ಹಂಗಾಮಿನ ಬೆಳೆಗಳು ಸಂಪೂರ್ಣವಾಗಿ ಹಾನಿಯಾಗಿದ್ದು, ವಿಮಾ ಕಂಪನಿಗಳು ರೈತರಿಗೆ ಗೊಂದಲಕ್ಕೆ ಎಡೆಮಾಡಿಕೊಡದೆ ಸೂಕ್ತ ಪರಿಹಾರ ನೀಡಬೇಕು ಹಾಗೂ ಗ್ರಾಮ, ಹೋಬಳಿ ಹಾಗೂ ತಾಲ್ಲೂಕು ಮಟ್ಟದಲ್ಲಿ ಸಮೀಕ್ಷೆ ನಡೆಸಿ ರೈತರ ಬಳಿ ಮೂಲ ದಾಖಲೆಗಳನ್ನು ಪಡೆದು ಪರಿಶೀಲಿಸಿಬೇಕು ಎಂದರು.

ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ನೀಲಾ ಎಸ್, ಜಂಟಿ ಕೃಷಿ ನಿರ್ದೇಶಕ ಶ್ರೀನಿವಾಸ್ ಚಿಂತಾಲ್, ತೋಟಗಾರಿಕೆ ಇಲಾಖೆಯ ಉಪ ನಿರ್ದೇಶಕ ರಾಘವೇಂದ್ರ ಪ್ರಸಾದ್, ಜಿಲ್ಲಾ ಕುಷ್ಠ ರೋಗ ನಿರ್ಮೂಲನಾಧಿಕಾರಿ ಡಾ. ಮಂಜುನಾಥ್ ಪಾಟೀಲ್ ಉಪಸ್ಥಿತರಿದ್ದರು.

# ಕೇಂದ್ರದ ಯೋಜನೆಗಳಿಂದ ಹೊರಗುಳಿದವರನ್ನು ಯೋಜನಾ ವ್ಯಾಪ್ತಿಗೆ ತರಲು ಸಿದ್ದೇಶ್ವರ್ ಸೂಚನೆ

» ದಾವಣಗೆರೆ



ಕೇಂದ್ರ ಸರ್ಕಾರದ ಯೋಜನೆಗಳಿಂದ ಹೊರಗುಳಿದವರನ್ನು ಗುರುತಿಸಿ ಅವರನ್ನು ಯೋಜನೆ ವ್ಯಾಪ್ತಿಗೆ ತರುವುದು ವಿಕಸಿತ ಭಾರತ ಸಂಕಲ್ಪ ಯಾತ್ರೆಯ ಉದ್ದೇಶವಾಗಿದೆ ಎಂದು ಸಂಸದ ಜಿ.ಎಂ.ಸಿದ್ದೇಶ್ವರ ಹೇಳಿದರು.

ನಗರದ ತರಳಬಾಳು ಕೃಷಿ ವಿಜ್ಞಾನ ಕೇಂದ್ರದ ಆವರಣದಲ್ಲಿ ವಿಕಸಿತ ಭಾರತ ಸಂಕಲ್ಪ ಯಾತ್ರೆಗೆ ಚಾಲನೆ ನೀಡಿ ಅವರು ಮಾತನಾಡಿದರು. ಕೇಂದ್ರ ಸರಕಾರದ ಜನ ಕಲ್ಯಾಣ ಕಾರ್ಯಕ್ರಮಗಳ ಮಾಹಿತಿಯನ್ನು ದಾವಣಗೆರೆ ಜಿಲ್ಲೆಯ ಎಲ್ಲ 194 ಗ್ರಾಮ ಪಂಚಾಯತಿಗಳ 2 ಸಾವಿರಕ್ಕೂ ಅಧಿಕ ಬೂತ್ ಗಳಿಗೆ ತಲುಪಿಸುವ ಕೆಲಸವನ್ನು ಸಂಕಲ್ಪ ಯಾತ್ರೆ ಮೂಲಕ ಮಾಡಲಾಗುವುದು ಎಂದರು.

ಜನವರಿ 25 ರ ವರೆಗೆ ಸಂಕಲ್ಪ ಯಾತ್ರೆ ನಡೆಯಲಿದ್ದು ಗ್ರಾಮೀಣ ಪ್ರದೇಶಗಳಲ್ಲಿ ಕೇಂದ್ರ ಪುರಸ್ಕೃತ ಯೋಜನೆಗಳ ಪ್ರಚಾರ ನಡೆಸಲಾಗುವುದು. ಆಯುಷ್ಯಾನ್ ಭಾರತ್, ಕೃಷಿ ಸಿಂಚಯಿನಿ, ಮಾತೃವಂದನಾ, ಸಾಯಿಲ್ ಹೆಲ್ತ್ ಕಾರ್ಡ್, ಪ್ರಧಾನಮಂತ್ರಿ ವಿಶ್ವಕರ್ಮ ಯೋಜನೆ, ಪ್ರಧಾನಮಂತ್ರಿ ಸ್ವ ನಿಧಿ ಸೇರಿದಂತೆ ಕೇಂದ್ರ ಸರ್ಕಾರದ ಆರು ಸಚಿವಾಲಯದ ಮೂಲಕ 70 ಕ್ಕೂ ಹೆಚ್ಚು ಯೋಜನೆಗಳನ್ನು ಜಾರಿಗೆ ತರಲಾಗಿದೆ ಎಂದರು.ಯೋಜನೆಗಳಿಗೆ ಸಂಭಂದಿಸಿದ ಇಲಾಖಾ ಅಧಿಕಾರಿಗಳು ಸವಲತ್ತಗಳ ಬಗ್ಗೆ ಜನರಿಗೆ ಮನವರಿಕೆ ಮಾಡಿಕೊಡಬೇಕಲ್ಲದೇ ಯೋಜನೆಯಿಂದ ಹೊರಗೆ ಇರುವ ಜನರನ್ನು ಯೋಜನಾ ವ್ಯಾಪ್ತಿಗೆ ತರಬೇಕೆಂದು ಸೂಚಿಸಿದ ಅವರು, ರಾಜ್ಯ ಸರ್ಕಾರದ ಉಚಿತ ಯೋಜನೆಗಳು ಸರಿಯಾಗಿ ಜನರಿಗೆ ತಲುಪುತ್ತಿಲ್ಲ. ಆದರೆ ಕೇಂದ್ರ ಸರ್ಕಾರದ ಹಲವು ಯೋಜನೆಗಳು ನಿಜವಾದ ಫಲಾನುಭವಿಗಳಿಗೆ ದೊರೆತಿವೆ. ಈ ಮೂಲಕ ದೇಶದ 13 ಕೋಟಿಗೂ ಆಧಿಕ ಜನರು ಬಡತನ ರೇಖೆಯಿಂದ ಹೊರ ಬಂದಿದ್ದಾರೆ. 2024 ರ ಲೋಕಸಭಾ ಚುನಾವಣೆಯಲ್ಲಿ ಮತ್ತೊಮ್ಮೆ ಮೋದಿಯವರು ಗೆದ್ದು ಪ್ರಧಾನಿಯಾದರೆ ಈ ದೇಶದ ಚಿತ್ರಣ ಸಂಪೂರ್ಣ ಬದಲಾಗಲಿದೆ ಎಂದು ಅವರು ಹೇಳಿದರು.

ಬಳಿಕ ಸಂಸದರು ಕೃಷಿ ಬಳಕೆಯ ಡ್ರೋನ್ ಪ್ರಾತ್ಯಕ್ಷಿಕೆ ವೀಕ್ಷಿಸಿದರು. ಈ ಸಂದರ್ಭದಲ್ಲಿ ಮಾರ್ಗದರ್ಶಿ ಬ್ಯಾಂಕ್ ವ್ಯವಸ್ಥಾಪಕ ಪ್ರಕಾಶ್, ನಬಾರ್ಡ್ ಅಧಿಕಾರಿ ರಶ್ಮಿರೇಖಾ, ತರಳಬಾಳು ಕೃಷಿ ವಿಜ್ಞಾನಿ ಡಾ.ದೇವರಾಜ್ ಉಪಸ್ಥಿತರಿದ್ದರು. ನಂತರ ಪ್ರಚಾರ ವಾಹನ ಜಗಳೂರು ತಾಲ್ಲೂಕಿನ ದೊಣೆಹಳ್ಳಿ ಹಾಗೂ ಮುಸ್ಟೂರು ನ್ಯಾಮತಿ ತಾಲ್ಲೂಕಿನ ಗುಡ್ಡೆಹಳ್ಳಿ, ಕೆಂಚಿಕೊಪ್ಪ ಗ್ರಾಮಗಳಲ್ಲಿ ಪ್ರಚಾರಾಂದೋಲನಾ ನಡೆಸಿ ಫಲಾನುಭವಿಗಳಿಗೆ ಸವಲತ್ತುಗಳನ್ನು ವಿತರಿಸಲಾಯಿತು.

# ಗ್ರಾಮೀಣ ಬ್ಯಾಂಕ್‌ನಿಂದ ರೈತರಿಗೆ ನೋಟಿಸ್: ರೈತರ ಪ್ರತಿಭಟನೆ



» ಚಳ್ಳಕೆರೆ

ರಾಜ್ಯ ಸರ್ಕಾರ ಚಳ್ಳಕೆರೆ ತಾಲ್ಲೂಕು ಸೇರಿದಂತೆ ರಾಜ್ಯ ವಿವಿಧ ತಾಲ್ಲೂಕುಗಳನ್ನು ಬರಗಾಲಪೀಡಿತ ಪ್ರದೇಶವೆಂದು ಘೋಷಣೆ ಮಾಡಿದ್ದು, ಈ ಭಾಗದಲ್ಲಿ ರೈತರು ರಾಷ್ಟ್ರಿಕೃತ ಅಥವಾ ಯಾವುದೇ ಬ್ಯಾಂಕ್‌ನಲ್ಲಿ ಸಾಲ ಪಡೆದಿದ್ದರೆ ಸಾಲವಸೂಲಾತಿಗಾಗಿ ಯಾವುದೇ ಕಾನೂನು ಕ್ರಮವವನ್ನು ಕೈಗೊಳ್ಳಬಾರದು ಹಾಗೂ ಸಾಲಗಾರರಿಗೆ ನೋಟಿಸ್ ಜಾರಿ ಮಾಡಬಾರದು ಎಂಬ ನಿಯಮವಿದ್ದರೂ ತಳಕು ಹಾಗೂ ಸುತ್ತಮುತ್ತಲ ಗ್ರಾಮೀಣ ಬ್ಯಾಂಕ್ ರೈತರಿಗೆ ನೋಟಿಸ್ ನೀಡುತ್ತಿವೆ ಎಂದು ಆರೋಪಿಸಿ ಬ್ಯಾಂಕ್‌ನ ನೋಟಿಸ್ ಸುಟ್ಟು ಪ್ರತಿಭಟನೆ ನಡೆಸಲಾಯಿತು.

ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ(ಬಡಗಲಪುರ ನಾಗೇಂದ್ರ ಬಣ) ರಾಜ್ಯ ಉಪಾಧ್ಯಕ್ಷ ಬೇಡರೆಡ್ಡಿಹಳ್ಳಿ ಬಸವರೆಡ್ಡಿ ನೇತೃತ್ವದಲ್ಲಿ ತಾಲ್ಲೂಕು ಕಚೇರಿಗೆ ಆಗಮಿಸಿ ಸರ್ಕಾರದ ವಿರುದ್ಧ ಪ್ರತಿಭಟಿಸಿ ಬ್ಯಾಂಕ್‌ನವರು ನೀಡಿದ ನೋಟಿಸನ್ನು ತಹಶೀಲ್ದಾರ್ ರೇಹಾನ್ ಪಾಷ ಸಮ್ಮುಖದಲ್ಲೇ ಸುಟ್ಟರು. ತಾಲ್ಲೂಕು ಆಡಳಿತ ಈ ಬಗ್ಗೆ ಕೂಡಲೇ ಬ್ಯಾಂಕ್‌ನ ವ್ಯವಸ್ಥಾಪಕರಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿ ಯಾವುದೇ ಕಾರಣಕ್ಕೂ ರೈತರಿಗೆ ಸಾಲವಸೂಲಾತಿ ನೋಟಿಸ್ ನೀಡದಂತೆ ಎಚ್ಚರಿಕೆ ವಹಿಸಬೇಕು ಎಂದರು ಆಗ್ರಹಿಸಿದರು.

ಮನವಿ ಸ್ವೀಕರಿಸಿ ಮಾತನಾಡಿದ ತಹಶೀಲ್ದಾರ್ ರೇಹಾನ್ ಪಾಷ, ಸರ್ಕಾರ ಈಗಾಗಲೇ ಈ ಪ್ರದೇಶವನ್ನು ಬರಗಾಲಪೀಡಿತ ವ್ಯಾಪ್ತಿಗೆ ಸೇರ್ಪಡೆ ಮಾಡಿದೆ. ಆದರೆ, ರೈತರಿಗೆ ಸಾಲವಸೂಲಾತಿಗಾಗಿ ನೋಟಿಸ್ ನೀಡುವಂತಿಲ್ಲ. ಈ ಬಗ್ಗೆ ಸಂಬಂಧಪಟ್ಟ ಬ್ಯಾಂಕ್ ಹಿರಿಯ ಅಧಿಕಾರಿಗಳೊಂದಿಗೆ ಚರ್ಚಿಸಿ ಕ್ರಮ ಕೈಗೊಳ್ಳುವ ಭರವಸೆ ನೀಡಿದರು. ರೈತ ಮುಖಂಡರಾದ ದೊಡ್ಡ ಉಳ್ಳಾರ್ತಿ ಕರಿಯಣ್ಣ, ಡಿ.ಚಂದ್ರನಾಯ್ಕ, ತಿಪ್ಪಯ್ಯ, ಹೊನ್ನೂರು ಶ್ರೀನಿವಾಸ್, ಗಂಗಾಧರ, ರಾಜಣ್ಣ, ಎಸ್. ಮಂಜುನಾಥ, ಚಿತ್ತಪ್ಪ, ತಿಪ್ಪಯ್ಯ ಮುಂತಾದವರು ಭಾಗವಹಿಸಿದ್ದರು.

# ನ.೩೦ ರಂದು ಜಿಲ್ಲಾ ಮಟ್ಟದ ಸಿರಿಧಾನ್ಯ ಮತ್ತು ಕೃಷಿ ವಸ್ತು ಪ್ರದರ್ಶನ

» ಹೊಸದುರ್ಗ

ನ.30 ರಂದು ಗುರುವಾರ ಕೃಷಿ ಇಲಾಖೆ ವತಿಯಿಂದ ತಾಲ್ಲೂಕಿನ ಕಸಬಾ ಹೋಬಳಿ, ಕೆಲ್ಲೋಡು ಗ್ರಾಮದ ಕನಕ ಗುರುಪೀಠದಲ್ಲಿ 2023–24 ನೇ ಸಾಲಿನ ರಾಷ್ಟ್ರೀಯ ಆಹಾರ ಮತ್ತು ಪೌಷ್ಠಿಕ ಭದ್ರತೆ–ನ್ಯೂಟ್ರಿ ಸಿರಿಧಾನ್ಯಗಳ ಯೋಜನೆಯಡಿ ಜಿಲ್ಲಾ ಮಟ್ಟದ ಸಿರಿಧಾನ್ಯ ಹಬ್ಬ ಕಾರ್ಯಕ್ರಮದಡಿ ಸಿರಿಧಾನ್ಯ ಮತ್ತು ಕೃಷಿ ವಸ್ತು ಪ್ರದರ್ಶನ ಹಾಗೂ ಬೆಳಿಗ್ಗೆ 10 ಗಂಟೆಗೆ "ಸಿರಿಧಾನ್ಯಗಳ ಬಗ್ಗೆ ಅರಿವು ಮೂಡಿಸುವ ಜಾಥಾ ಕಾರ್ಯಕ್ರಮ 11 ಗಂಟೆಗೆ ಸಿರಿಧಾನ್ಯಗಳ ಹಬ್ಬದ ಅಂಗವಾಗಿ ಕೃಷಿ ವಸ್ತು ಪ್ರದರ್ಶನ ಹಾಗೂ ಕೃಷಿ ವಿಜ್ಞಾನಿಗಳಿಂದ ಸಿರಿಧಾನ್ಯದ ಮಹತ್ವ, ಮೌಲ್ಯವರ್ಧನೆ ಬಗ್ಗೆ ವಿಚಾರ ಗೋಷ್ಠಿ ಕಾರ್ಯಕ್ರಮ ಹಾಗೂ ಮಧ್ಯಾಹ್ನ 3 ಗಂಟೆಗೆ ಸಿರಿಧಾನ್ಯಗಳ ಮಾರುಕಟ್ಟೆ, ಮೌಲ್ಯವರ್ಧನೆ ಹಾಗೂ ಸಿರಿಧಾನ್ಯಗಳ ಸಂಸ್ಕರಣೆ ಕುರಿತು ಮಾರುಕಟ್ಟೆ ಕಾರ್ಯಗಾರವನ್ನು ಏರ್ಪಡಿಸಿದ್ದು ತಾಲ್ಲೂಕಿನ ಎಲ್ಲಾ ರೈತ ಭಾಂಧವರು ಕಾರ್ಯಕ್ರಮದಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ಸಿ.ಎಸ್.ಈಶ ಪ್ರಕಟಣೆಯಲ್ಲಿ ತಿಳಿಸಿದ್ದಾರೆ

ಪ್ರಮುಖ ಸುದ್ದಿ

### ವಿಕಸಿತ ಭಾರತ ಸಂಕಲ್ಪ ಯಾತ್ರೆಯ ಪ್ರಯೋಜನ ಎಲ್ಲರೂ ಪಡೆಯಬೇಕು: ವ್ಯವಸ್ಥಾಪಕ ತಿಪ್ಪೇಶ್

# ಡಿಎಸ್ ಹಳ್ಳಿ: ವಿಕಸಿತ ಭಾರತ ಸಂಕಲ್ಪ ಯಾತ್ರೆಗೆ ಚಾಲನೆ

» ಚಿತ್ರದುರ್ಗ



ಕೇಂದ್ರ ಸರ್ಕಾರದ ಹಲವು ಜನಪ್ರಿಯ ಯೋಜನೆಗಳನ್ನುಅರ್ಹ ಫಲಾನುಭವಿಗಳಿಗೆ ತಲುಪಿಸುವ ಉದ್ದೇಶದಿಂದ ವಿಕಸಿತ ಭಾರತ ಸಂಕಲ್ಪ ಅಭಿಯಾನದ ಯಾತ್ರೆ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿಗಳಿಗೂ ಭೇಟಿ ನೀಡಿಲಿದ್ದು, ಸಾರ್ವಜನಿಕರು ಇದರ ಪ್ರಯೋಜನ ಪಡೆದುಕೊಳ್ಳಬೇಕು ಎಂದು ಲೀಡ್ ಬ್ಯಾಂಕ್ ಹಿರಿಯ ವ್ಯವಸ್ಥಾಪಕ ತಿಪ್ಪೇಶ್ ಮನವಿ ಮಾಡಿದರು.

ಚಿತ್ರದುರ್ಗ ತಾಲ್ಲೂಕಿನ ದೊಡ್ಡಸಿದ್ದವ್ವನಹಳ್ಳಿ ಗ್ರಾಮ ಪಂಚಾಯತಿ ಆವರಣದಲ್ಲಿಮಂಗಳವಾರಆಯೋಜಿಸಿದ್ದ ವಿಕಸಿತ ಭಾರತ್ ಸಂಕಲ್ಪ ಯಾತ್ರೆ ಕಾರ್ಯಕ್ರಮದಲ್ಲಿ ಮಾತನಾಡಿ, ವಿಕಸಿಕ ಭಾರತ ಸಂಕಲ್ಪ ಅಭಿಯಾನ ದೇಶದಾದ್ಯಂತ ನಡೆಯುತ್ತಿದ್ದು, ಚಿತ್ರದುರ್ಗದಲ್ಲೂ ನ.27 ರಿಂದ ಪ್ರಾರಂಭವಾಗಿದ್ದು, 2024 ಜನವರಿ 25 ರವರೆಗೆ ನಡೆಯಲಿದೆ. ಜಿಲ್ಲೆಯ ಪ್ರತಿ ಗ್ರಾಮ ಪಂಚಾಯಿತಿಯಲ್ಲಿ ಕೇಂದ್ರ ಸರ್ಕಾರದ ಯೋಜನೆಗಳನ್ನು ಅರ್ಹ ಫಲಾನುಭವಿಗಳಿಗೆತಲುಪಿಸುವುದುಹಾಗೂ ಯೋಜನೆಗಳ ಬಗ್ಗೆ ಜನರಿಗೆ ಅರಿವು ಮತ್ತು ಜಾಗೃತಿ ಮೂಡಿಸುವ ಉದ್ದೇಶದಿಂದ ಜಿಲ್ಲೆಯ 189 ಗ್ರಾಮ ಪಂಚಾಯಿತಿಗಳಲ್ಲೂ ಯಾತ್ರೆ ಸಂಚರಿಸಲಿದ್ದು ಫಲಾನುಭವಿಗಳು ಇದರ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಕೋರಿದರು.

ಪ್ರಧಾನಮಂತ್ರಿ ಸುರಕ್ಷಾ ಬಿಮಾ ಯೋಜನೆ, ಪ್ರಧಾನ ಮಂತ್ರಿ ಜೀವನ್ ಜ್ಯೋತಿ ಯೋಜನೆ, ಪ್ರಧಾನಮಂತ್ರಿ ಉಜ್ವಲ ಯೋಜನೆ, ಕಿಸಾನ್ ಕೆಡಿಟ್ ಕಾರ್ಡ್, ಪ್ರಧಾನಮಂತ್ರಿ ವಿಶ್ವಕರ್ಮ ಯೋಜನೆ ಸೇರಿದಂತೆ ಕೇಂದ್ರ ಸರಕಾರದ ಎಲ್ಲಾ ಯೋಜನೆಗಳ ಬಗ್ಗೆ ಜನರಿಗೆ ಅರಿವು ಮತ್ತು ಜಾಗೃತಿ ಮೂಡಿಸಲಾಗುತ್ತಿದೆ. ಕೆಲವು ಯೋಜನೆಗಳಿಗೆಅರ್ಹ ಫಲಾನುಭವಿಗಳನ್ನು ಸ್ಥಳದಲ್ಲೇ ನೋಂದಣಿ ಮಾಡಿಕೊಂಡು ಯೋಜನೆಗಳನ್ನು ಮುಟ್ಟಿಸುವ ಕೆಲಸ ಮಾಡಲಾಗುತ್ತಿದೆ ಎಂದು ಹೇಳಿದರು.

ಕಿಸಾನ್ ಕ್ರೆಡಿಟ್ ಕಾರ್ಡ್ ಫಲಾನುಭವಿ ಶರಣಪ್ಪ ತಮ್ಮ ಅನುಭವ ಹಂಚಿಕೊಂಡು, ಮಳೆ ಆಶ್ರಿತ ಮೆಕ್ಕೆಜೋಳ, ಕಡ್ಲೆ ಸೇರಿದಂತೆ ಮತ್ತಿತರ ಬೆಳೆ ಬೆಳೆಯಲಾಗುತ್ತಿದ್ದು, ಕೇಂದ್ರ ಸರಕಾರದ ಕೆಸಿಸಿ ಯೋಜನೆಯಡಿ ಸಬ್ಸಿಡಿ ಹಣ ಪಡೆದುಕೊಳ್ಳುತ್ತಿದ್ದೇನೆ. ಇದರಿಂದ ನಮಗೆ ಅನುಕೂಲ ಆಗುತ್ತಿದೆ ಎಂದು ತಿಳಿಸಿದರು.ಪ್ರಧಾನಮಂತ್ರಿ ಸುರಕ್ಷಾ ಬಿಮಾ ಯೋಜನೆಯ ಫಲಾನುಭವಿ ಮಲ್ಲೇಶ್ ಮಾತನಾಡಿ, ಕರ್ನಾಟಕ ಗ್ರಾಮೀಣ ಬ್ಯಾಂಕ್ ವ್ಯವಸ್ಥಾಪಕರು ಪಿಎಂಎಸ್‌ಬಿವೈ ಯೋಜನೆ ಬಗ್ಗೆ ಮಾಹಿತಿ ನೀಡಿ ಈ ಯೋಜನೆ ನೋಂದಣಿ ಮಾಡಿಸಿದ್ದರು. 2022ರಲ್ಲಿ ನನಗೆ ಅಪಘಾತವಾಗಿದ್ದು ಕಾಲು ಸ್ವಾಧೀನ ಇಲ್ಲದಂತಾಗಿತ್ತು. ಈ ಯೋಜನೆಯಡಿ 1 ಲಕ್ಷ ವಿಮೆ ಪಡೆದುಕೊಂಡಿರುವುದಾಗಿ ಹೇಳಿದರು.

ಪ್ರಧಾನಮಂತ್ರಿ ಉಜ್ವಲ ಯೋಜನೆಯ ಫಲಾನುಭವಿ ವಾಣಿ ಮಾತನಾಡಿ, ವಿಕಸಿತ ಭಾರತ ಸಂಕಲ್ಪ ಯಾತ್ರೆ ಇಂದು ನಮ್ಮ ಗ್ರಾಮಕ್ಕೆ ಬಂದಿದ್ದು ಅಗತ್ಯ ದಾಖಲೆಗಳನ್ನು ಪಡೆದು ಸ್ಥಳದಲ್ಲೇ ಪ್ರಧಾನಮಂತ್ರಿ ಉಜ್ವಲ ಯೋಜನೆಯಡಿ ಉಚಿತವಾಗಿ ಗ್ಯಾಸ್ ಸಂಪರ್ಕ ಕಲ್ಪಿಸಿಕೊಟ್ಟಿರುವುದು ತುಂಬಾ ಅನುಕೂಲವಾಯಿತು ಎಂದು ತಿಳಿಸಿದರು.

ದೊಡ್ಡಸಿದ್ದವ್ವನ ಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಭಾಗ್ಯಮ್ಮ, ಹಿರಿಯೂರು ಬಬ್ಬೂರು ಫಾರಂನ ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿ ಎಸ್.ಓಂಕಾರಪ್ಪ, ಆರ್ಥಿಕ ಸಾಕ್ಷರತಾ ಕೇಂದ್ರದ ತಿಪ್ಪೇಸ್ವಾಮಿ, ಡಿಎಸ್ ಹಳ್ಳಿ ಗ್ರಾಪಂ ಉಪಾಧ್ಯಕ್ಷೆ ಸುಧಾ, ಕರ್ನಾಟಕ ಗ್ರಾಮೀಣ ಬ್ಯಾಂಕ್ ವ್ಯವಸ್ಥಾಪಕ ಡಿ.ಸತೀಶ್, ಪಂಜಾಬ್ ನ್ಯಾಷನಲ್ ಬ್ಯಾಂಕ್ ವ್ಯವಸ್ಥಾಪಕಿ ಬಿ.ಸಿ.ಲಲಿತಾ, ಸಿಬ್ಬಂದಿ ಎಚ್.ಎಂ.ಯೋಗಿತಾ ಸೇರಿದಂತೆ ಇತರರು ಇದ್ದರು. ಈ ಸಂದರ್ಭದಲ್ಲಿ ಪ್ರತಿಜ್ಞಾವಿಧಿ ಬೋಧಿಸಲಾಯಿತು. ಉಜ್ವಲ ಫಲಾನುಭವಿಗಳಿಗೆ ದಾಖಲಾತಿ ಪತ್ರಗಳನ್ನು ಹಸ್ತಾಂತರಿಸಲಾಯಿತು. ಗ್ರಾಮದ ರೈತರೊಬ್ಬರ ಹೊಲದಲ್ಲಿ ಹೊಲಕ್ಕೆ ಔಷಧಿ ಸಿಂಪಡಿಸುವ ಡ್ರೋಣ್‌ನಿಂದ ಪ್ರಾತ್ಯಕ್ಷಿಕೆ ನಡೆಸಲಾಯಿತು.

ನಮ್ಮ ಜನ
NAMMA JANA

29-11-2023 ಬುಧವಾರ
29-11-2023 Wednesday



## ಫಾಸ್ಟ್ ನ್ಯೂಸ್

### ಆಯವ್ಯಯ ಅಂದಾಜು ಪಟ್ಟಿ ತಯಾರಿ: ಸಾರ್ವಜನಿಕ ಸಭೆ

» **ದಾವಣಗೆರೆ**

ಮಹಾನಗರ ಪಾಲಿಕೆಯ ಪ್ರಸಕ್ತ ಸಾಲಿನ ಆಯವ್ಯಯ ಅಂದಾಜು ಪಟ್ಟಿ ತಯಾರಿಸಲು ಸಂಘ-ಸಂಸ್ಥೆಗಳು ಮತ್ತು ಸಾರ್ವಜನಿಕರಿಂದ ಸಲಹೆ ಸೂಚನೆಗಳನ್ನು ಪಡೆಯಲು ಡಿಸೆಂಬರ್ 2 ರಂದು ಮಧ್ಯಾಹ್ನ 4 ಗಂಟೆಗೆ ಮಹಾನಗರ ಪಾಲಿಕೆಯ ಕೌನ್ಸಿಲ್ ಸಭಾಂಗಣದಲ್ಲಿ ಸಾರ್ವಜನಿಕ ಸಭೆ ಏರ್ಪಡಿಸಲಾಗಿದೆ ಎಂದು ಮಹಾನಗರ ಪಾಲಿಕೆ ಆಯುಕ್ತೆ ರೇಣುಕಾ ತಿಳಿಸಿದ್ದಾರೆ.

### ವಿದ್ಯುತ್ ವ್ಯತ್ಯಯ

» **ದಾವಣಗೆರೆ**

ಜಲಸಿರಿ ಯೋಜನೆಯಡಿಯಲ್ಲಿ ನಿರಂತರ ಶುದ್ಧಕುಡಿಯುವ ನೀರಿನ ಸರಬರಾಜು ಯೋಜನೆ ಕಾಮಗಾರಿಯನ್ನು ಹಮ್ಮಿಕೊಂಡಿರುವುದರಿಂದ ನ.29 ರಂದು ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ. ಎಮ್.ಸಿ.ಸಿ.ಬಿ ಎಫ್2 ಫೀಡರ್ ವ್ಯಾಪ್ತಿಯ ಶಾಮನೂರ್ ರಸ್ತೆ, ಎಸ್. ಎಸ್ ಲೇಔಟ್ ಎ ಬ್ಲಾಕ್, ಕುವೆಂಪು ನಗರ, ಲಕ್ಷ್ಮೀ ಫ್ಲೋರ್ ಮಿಲ್, ಜೆ.ಹೆಚ್ ಪಾರ್ಕ, ಸಿದ್ದವೀರಪ್ಪ ಬಡಾವಣೆ, ಬಿ.ಐ.ಇ.ಟಿರಸ್ತೆ, ಎಸ್.ಎನ್. ಲೇಔಟ್,ಗ್ಲಾಸ್‌ಹೌಸ್ ಏರಿಯಾ ಹಾಗೂ ಸುತ್ತ ಮುತ್ತಲಿನ ಪ್ರದೇಶಗಳಲ್ಲಿ ಎಸ್.ಎಸ್. ಹೈಟೆಕ್ ಫೀಡರ್ ವ್ಯಾಪ್ತಿಯ ಎಸ್.ಓ.ಜಿ ಕಾಲೋನಿ ಎ, ಬಿ & ಸಿ ಬ್ಲಾಕ್, ಬುದ್ಧ, ಬಸವ ಭೀಮ ನಗರ ,ಕರ್ನಾಟಕ ಬೀಜ ನಿಗಮ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ತಿಳಿಸಿದೆ.

### ವಸತಿ ಶಾಲೆ ವಿದ್ಯಾರ್ಥಿಗಳ ಅಸ್ವಸ್ಥ, ಪ್ರಾಂಶುಪಾಲರು ಹಾಗೂ ನಿಲಯ ಪಾಲಕಿ ಅಮಾನತುಗೊಳಿಸಿದ ಡಿಸಿ

» **ದಾವಣಗೆರೆ**

ಚನ್ನಗಿರಿ ತಾಲ್ಲೂಕಿನ ಕಾಕನೂರು ಗ್ರಾಮದ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಯಲ್ಲಿ ವಿಷಪೂರಿತ ಆಹಾರ ಪೂರೈಕೆ ಹಾಗೂ ಕರ್ತವ್ಯ ಲೋಪ ಎಸಗಿದ ಪ್ರಾಂಶುಪಾಲ ಮಂಜುನಾಥ್ ಪುರದ್ ಹಾಗೂ ನಿಲಯ ಪಾಲಕಿ ನಸೀಮಾ ಬಾನು ಅವರನ್ನು ಸೇವೆಯಿಂದ ಅಮಾನತುಗೊಳಿಸಿ ಜಿಲ್ಲಾಧಿಕಾರಿ ಡಾ.ವೆಂಕಟೇಶ್ ಎಂ.ವಿ ಆದೇಶಿಸಿದ್ದಾರೆ. ಈ ವಸತಿ ಶಾಲೆಯಲ್ಲಿ ಸೋಮವಾರ ಬೆಳಗ್ಗೆ ಉಪಹಾರ ಸೇವಿಸಿದ ನಂತರ ಕೆಲ ವಿದ್ಯಾರ್ಥಿಗಳ ಆರೋಗ್ಯದಲ್ಲಿ ಏರುಪೇರಾಗಿರುವುದು ಕಂಡುಬಂದಿರುತ್ತದೆ. ತಕ್ಷಣ ವಿದ್ಯಾರ್ಥಿಗಳನ್ನು ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಲಾಗಿರುತ್ತದೆ. ಅಸ್ವಸ್ಥರಾಗಲು ವಿಷಪೂರಿತ ಆಹಾರ ಸೇವನೆ ಕಾರಣವಾಗಿದ್ದು, ಸರಿಯಾದ ನಿರ್ವಹಣೆ ಮಾಡದಿರುವುದು ಮತ್ತು ಸ್ವಚ್ಛತೆ ಕಾಪಾಡಿಕೊಳ್ಳದಿರುವುದು ಕಾರಣವಾಗಿದ್ದು, ಈ ಘಟನೆಗೆ ವಸತಿ ಶಾಲೆ ಪ್ರಾಂಶುಪಾಲರು ಮತ್ತು ನಿಲಯ ಪಾಲಕಿ ಅವರ ಕರ್ತವ್ಯ ನಿರ್ಲಕ್ಷ್ಯತೆ ಕಾರಣವಾಗಿದೆ ಎಂದು ಪರಿಗಣಿಸಿ ಅಮಾನತುಗೊಳಿಸಲಾಗಿದೆ. ಹೆಚ್ಚುವರಿ ಪ್ರಭಾರ ವ್ಯವಸ್ಥೆ: ಕಾಕನೂರು ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಯ ಪ್ರಾಂಶುಪಾಲರು ಮತ್ತು ನಿಲಯ ಪಾಲಕಿಯನ್ನು ಅಮಾನತುಗೊಳಿಸಿರುವುದರಿಂದ ಪ್ರಾಂಶುಪಾಲರನ್ನಾಗಿ ಮಾವಿನಹೊಳೆ ಇಂದಿರಾ ಗಾಂಧಿ ವಸತಿ ಶಾಲೆ ಪ್ರಾಂಶುಪಾಲರಾದ ಗುರುಮೂರ್ತ್ಯಪ್ಪ ಇವರಿಗೆ ಹೆಚ್ಚುವರಿ ಪ್ರಭಾರ ವಹಿಸಿಕೊಳ್ಳಲು ಆದೇಶಿಸಲಾಗಿದೆ. ಮತ್ತು ನಿಲಯ ಪಾಲಕರಾಗಿ ಕಾಕನೂರು ವಸತಿ ಶಾಲೆಯ ಸ್ಟಾಫ್ ನರ್ಸ್ ಅನಿತಾ ಆರ್ ಅವರಿಗೆ ಹೆಚ್ಚುವರಿ ಪ್ರಭಾರದಲ್ಲಿರಿಸಿ ಆದೇಶಿಸಲಾಗಿದೆ.

### ನಗರದಲ್ಲಿ ಕಿಶೋರ ಕಾರ್ಮಿಕರ ಪತ್ತೆ

» **ದಾವಣಗೆರೆ**

ನವಂಬರ್ 28 ರಂದು ಪ್ಯಾನ್ ಇಂಡಿಯಾ ರಕ್ಷಣೆ ಮತ್ತು ಪುನರ್ವಸತಿ ಆಂದೋಲನದ ಅಂಗವಾಗಿ ದಾವಣಗೆರೆ ನಗರದಲ್ಲಿ ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆ ಹಾಗೂ ಬಾಲ್ಯಾವಸ್ಥೆ ಮತ್ತು ಕಿಶೋರಾವಸ್ಥೆ (ನಿಷೇಧ ಮತ್ತು ನಿಯಂತ್ರಣ) ತಿದ್ದುಪಡಿಕಾಯ್ದೆ ಕುರಿತು ವಿವಿಧ ಅಂಗಡಿ, ಹೋಟೆಲ್, ಗ್ಯಾರೇಜ್ ಹಾಗೂ ವಾಣಿಜ್ಯ ಸಂಸ್ಥೆಗಳಿಗೆ ಭೇಟಿ ನೀಡಿ ಅಧಿಕಾರಿಗಳು ಬಾಲ ಹಾಗೂ ಕಿಶೋರಾವಸ್ಥೆ ಕಾರ್ಮಿಕರ ತಪಾಸಣೆ ನಡೆಸಿ, ತಪಾಸಣೆಯಲ್ಲಿ 1 ಬಾಲಕಾರ್ಮಿಕ ಹಾಗೂ 2 ಕಿಶೋರ ಕಾರ್ಮಿಕರು ಅಪಾಯಕಾರಿ, ಅಪಾಯಕಾರಿಯಲ್ಲದ ಉದ್ದಿಮೆಯಲ್ಲಿ ಪತ್ತೆಯಾಗಿದ್ದು. ಪತ್ತೆಯಾದ ಬಾಲಕಾರ್ಮಿಕ ಹಾಗೂ ಕಿಶೋರಕಾರ್ಮಿಕರನ್ನು ಕೆಲಸದಿಂದ ಬಿಡುಗಡೆಗೊಳಿಸಿ ಮಕ್ಕಳ ಕಲ್ಯಾಣ ಸಮಿತಿಗೆ ಹಾಜರುಪಡಿಸಿ ಮಾಲೀಕರ ವಿರುದ್ದ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗಿದೆ. ಹಾಗೂ ಮಾಲೀಕರಿಗೆ ಕರಪತ್ರ& ಸ್ಟಿಕ್ಕರ್ಸ್ ನೀಡಿಜಾಗೃತಿ ಮೂಡಿಸಿದರು.

ಕಾರ್ಯಾಚರಣೆಯಲ್ಲಿ ಕಾರ್ಮಿಕ ನಿರೀಕ್ಷಕರಾದ ರಾಜಶೇಖರ ಹಿರೇಮಠ್, ರಾಜಪ್ಪ.ಟಿ, ಆರ್.ನಾಗೇಶ್ ಹಾಗೂ ಪೊಲೀಸ್ ಇಲಾಖೆ ಸಿಬ್ಬಂದಿಗಳು, ಮಕ್ಕಳ ರಕ್ಷಣಾಘಟಕದ ಸಿಬ್ಬಂದಿಗಳು, ಯೋಜನಾ ನಿರ್ದೇಶಕರು ಪ್ರಸನ್ನ.ಇ. ಎನ್ ಉಪಸ್ಥಿತರಿದ್ದರು.

# ಶೀಘ್ರ ಕಾಂತರಾಜ ವರದಿ ಜಾರಿಯಾಗಲಿ

» **ಚಿತ್ರದುರ್ಗ**




ಹೆಚ್. ಕಾಂತರಾಜ ಆಯೋಗದ ವರದಿಯಿಂದ ಶೋಷಣೆಗೆ ಒಳಗಾಗಿರುವ ಹಿಂದುಳಿದ ಜಾತಿ- ವರ್ಗಗಳಿಗೆ ನಿಜವಾಗಿಯೂ ಸಾಮಾಜಿಕ ನ್ಯಾಯ ದೊರೆಯುವುದರಲ್ಲಿ ಯಾವುದೇ ಅನುಮಾನವಿಲ್ಲ ಎಂದು ಹಿಂದುಳಿದ ಹಾಗೂ ಅತಿ ಹಿಂದುಳಿದ ವರ್ಗಗಳ ಜನ ಜಾಗೃತ ವೇದಿಕೆ ಅಧ್ಯಕ್ಷ ಆರ್. ಮೋಹನ್ ಹೇಳಿದರು.

ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿ

ಆದ್ದರಿಂದ ಹಿಂದುಳಿದ ಮತ್ತು ಅತಿ ಹಿಂದುಳಿದ ಜಾತಿ- ವರ್ಗಗಳಿಗೆ ಸಂಜೀವಿನಿ ಯಾಗಿರುವ ಹೆಚ್. ಕಾಂತರಾಜ ಆಯೋಗದ ವರದಿಯನ್ನು ಸಾಮಾಜಿಕ ನ್ಯಾಯಕ್ಕೆ ಬದ್ಧರಾಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಜಯಪ್ರಕಾಶ ಹೆಗಡೆಯವರ ಮೇಲೆ ಒತ್ತಡವನ್ನೇರಿ ವರದಿಯನ್ನು ಶೀಘ್ರವೇ ಸ್ವೀಕರಿಸಿ ಜಾರಿಗೊಳಿಸ ಬೇಕೆಂದು ಸರ್ಕಾರವನ್ನು ಶಿವಮೊಗ್ಗ ಜಿಲ್ಲಾ ಹಿಂದುಳಿದ ಮತ್ತು ಅತಿ ಹಿಂದುಳಿದ ಜನಜಾಗೃತಿ ವೇದಿಕೆ ಆಗ್ರಹಿಸಿದೆ.

ಕಾಂತರಾಜುರವರ ವರದಿ ಶೈಕ್ಷಣಿಕ ಮತ್ತು ಸಾಮಾಜಿಕ ಸಮೀಕ್ಷೆ ಎಂದಿದ್ದರೂ ಸದರಿ ಸಮೀಕ್ಷೆಯಲ್ಲಿ ಜಾತಿ ವಿವರಗಳು ಸಾಮಾಜಿಕ, ಶೈಕ್ಷಣಿಕ ಹಾಗೂ ಆರ್ಥಿಕ ಸ್ಥಿತಿಗತಿಗಳನ್ನು ಕಲೆ ಹಾಕಲಾಗಿದೆ ಎಂದು ನಂಬಲಾರ್ಹ ಮೂಲಗಳಿಂದ ತಿಳಿದುಬಂದಿದೆ. ಶೋಷಣೆಗೆ ಒಳಪಟ್ಟ ಹಿಂದುಳಿದ ಜಾತಿಗಳಿಗೆ ಮೀಸಲಾತಿ ನೀಡಬೇಕೆಂದು ಹಿಂದುಳಿದ ಆಯೋಗ ರಚಿಸಿ ಹಿಂದುಳಿದ ಜಾತಿಗಳ ಗುರುತಿಸಿ ಸೂಕ್ತ ಮೀಸಲಾತಿ ಜಾರಿ ಮಾಡಬೇಕೆಂದು ಡಾ. ಅಂಬೇಡ್ಕರ್ ಸಂವಿಧಾನದ ಪರಿಚ್ಛೇದದ 15 (4) 16 (4)ರ ಹಾಗೂ ಪರಿಚ್ಛೇದದ 340ರಲ್ಲಿ ಸ್ಪಷ್ಟವಾಗಿ ಉಲ್ಲೇಖಿಸಿರುವುದನ್ನು ನೋಡಿದರೆ ಹಿಂದುಳಿದ ಜಾತಿ, ವರ್ಗದವರಿಗೆ ನೀಡುತ್ತಿರುವ ಮೀಸಲಾತಿ ಭಿಕ್ಷೆಯಲ್ಲ ಅದು ಅವರ ಸಂವಿಧಾನ ಬದ್ಧ ಹಕ್ಕು ಎನ್ನುವುದು ಸ್ಪಷ್ಟವಾಗುತ್ತದೆ ಎಂದಿದ್ದಾರೆ.

ಹಿಂದುಳಿದ ಜಾತಿಗಳ ಮೀಸಲಾತಿಗೆ ಜಾತಿಗಣನೆ, ಸಾಮಾಜಿಕ ಶೈಕ್ಷಣಿಕ ಹಾಗೂ ಆರ್ಥಿಕ ಸಮೀಕ್ಷೆ ಅತ್ಯಂತ ಅವಶ್ಯಕ ಎಂಬುದು ಸ್ಪಷ್ಟವಾಗುತ್ತದೆ. ನಂತರ ಈ ವಿಚಾರದಲ್ಲಿ ಎಚ್ಚೆತ್ತುಕೊಂಡು ಕರ್ನಾಟಕ ಸರ್ಕಾರ ಹಿಂದುಳಿದ ಜಾತಿಗಳ ಮೀಸಲಾತಿ ಸವಲತ್ತುಗಳಿಗೆ ಅಂಕಿ-ಅಂಶಗಳು ಅವಶ್ಯಕ ಎನ್ನುವ ನಿಟಿನಲ್ಲಿ ಎಲ್.ಜಿ. ಹಾವನೂರು, ಟಿ. ವೆಂಕಟಸ್ವಾಮಿ, ಚಿನ್ನಪ್ಪ ರೆಡ್ಡಿ ಆಯೋಗದ ವರದಿಗಳು ಸಿದ್ಧಗೊಂಡವು. ಈ ದಾರಿಯಲ್ಲಿ ಸಾಗಿದ ಮತ್ತೊಂದು ಆಯೋಗದ ವರದಿ ಕಾಂತರಾಜ ಆಯೋಗದ ವರದಿ. ಕರ್ನಾಟಕ ಸರ್ಕಾರದ ಆದೇಶದ ಮೇರೆಗೆ 2014ರಂದು ಹೆಚ್. ಕಾಂತರಾಜ ನೇತೃತ್ವದಲ್ಲಿ ರಾಜ್ಯಹಿಂದುಳಿದ ವರ್ಗಗಳ ಶಾಶ್ವತ ಆಯೋಗ ನೇಮಕಗೊಂಡಿತು.

ಈ ವರದಿಯನ್ನು ಈಶ್ವರಪ್ಪ ರವರು ವರದಿಯನ್ನು ಬಿಸಾಕಿ ಎಂದರೆ ಬಿಜೆಪಿ ರಾಜ್ಯಾಧ್ಯಕ್ಷರಾದ ವಿಜಯೇಂದ್ರ ರವರು ಅರೆ ಬೆಂದ ವರದಿ ಎಂದು ಟೀಕಿಸಿದ್ದಾರೆ ಇದನ್ನು ಖಂಡಿಸಲಾಯಿತು.

ಜೈನ ಸಮುದಾಯದ ಮುಖಂಡ, ಕೆಪಿಸಿಸಿ ರಾಜ್ಯ ಉಪ ವಕ್ತಾರ ದರ್ಶನ ಬಳ್ಳೇಶ್ವರ ಮಾತನಾಡಿ, ಹಿಂದುಳಿದ ವರ್ಗಗಳ ಜಾತಿ, ರಾಜಕೀಯ ಅಧಿಕಾರ, ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಇತ್ಯಾದಿ ಮಾಹಿತಿಗಳನ್ನು ಸಂಗ್ರಹಿಸಿ ವೈಜಾನಿಕವಾಗಿ ಅಧ್ಯಯನ ಮಾಡಿ ಹಿಂದುಳಿದ ವರ್ಗಗಳ ಸಾಮಾಜಿಕ, ಆರ್ಥಿಕ ಇತ್ಯಾದಿ ಮಾಹಿತಿ ಗಳನ್ನು ಸಂಗ್ರಹಿಸಿ ವೈಜಾನಿಕವಾಗಿ ಅಧ್ಯಯನ ಮಾಡಿ ಹಿಂದುಳಿದ ವರ್ಗಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ವರದಿಯನ್ನು 2018ರಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಸರ್ಕಾರಕ್ಕೆ ವರದಿ ಸಲ್ಲಿಸುವ ಸಂದರ್ಭದಲ್ಲಿ ರಾಜಕೀಯ ಪ್ರಕ್ಷುಬ್ಧತೆ ಮತ್ತು ವಿಧಾನಸಭೆ ಚುನಾವಣೆಯಿಂದಾಗಿ ವರದಿಯು ಸರ್ಕಾರಕ್ಕೆ ಸಲ್ಲಿಕೆ ಯಾಗದೆ ಹಾಗೇ ಉಳಿಯಿತು. ಈ ವರದಿ ತಯಾರಿಸಲು ಸರ್ಕಾರಕ್ಕೆ ಸುಮಾರು 158.47 ಕೋಟಿ ರೂ.ಗಳು ವೆಚ್ಚ ವಾಗಿದೆ ಎಂದು ಹೇಳಲಾಗಿದೆ.ನಂತರ ನಡೆದ ಚುನಾವಣೆಯಲ್ಲಿ ಮುಖ್ಯಮಂತ್ರಿಯಾಗಿ ಅಧಿಕಾರಕ್ಕೆ ಬಂದ ಹೆಚ್.ಡಿ. ಕುಮಾರಸ್ವಾಮಿ, ಬಿ.ಎಸ್. ಯಡಿಯೂರಪ್ಪ, ಬಸವರಾಜಬೊಮ್ಮಾಯಿಯವರು ಕಾಂತರಾಜ ಆಯೋಗದ ವರದಿಯ ಬಗ್ಗೆಯಾವುದೇ ಚಕಾರವೆತ್ತದೆ ಜಾಣ ಮೌನ ಪ್ರದರ್ಶಿಸಿ ವರದಿಯನ್ನು ಹಾಗೆಯೇ ಶೈತ್ಯಾಗಾರದಲ್ಲಿ ಉಳಿಯುವಂತೆ ಮಾಡಿರುತ್ತಾರೆ ಎಂದು ದೂರಿದರು.

ಇದು ಹಿಂದುಳಿದ ಹಾಗೂ ಅತಿ ಹಿಂದುಳಿದಜಾತಿಗಳಿಗೆ ಮಾಡಿದ ಅಪಮಾನ ಹಿಂದುಳಿದ ಜಾತಿಗಳ ಒಟ್ಟು ಮತ ಪಡೆದು ಹಿಂದುಳಿದ ಜಾತಿಗಳ ಅಭಿವೃದ್ಧಿಗೆ ಅಡ್ಡಗಾಲು ಹಾಕುವ ಇಂತಹ ಕೃತ್ಯಗಳು ಈ ಜಾತಿ- ವರ್ಗಗಳಿಗೆ ಮಾಡಿದ ಮಹಾ ದ್ರೋಹ ಮತ್ತು ಅನ್ಯಾಯ ಎಂದು ಹೇಳಬೇಕಾಗುತ್ತದೆ. ಹೆಚ್. ಕಾಂತರಾಜ ಅವರ ನಂತರದಲ್ಲಿ ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷರಾಗಿ ಅಂದಿನ ಮುಖ್ಯಮಂತ್ರಿಯ ವರಾದ ಯಡಿಯೂರಪ್ಪನವರು ಹಾಗೂ ಮಾಜಿ ಸಚಿವರಾದ ಕೆ.ಎಸ್. ಈಶ್ವರಪ್ಪ ಶಿಫಾರಸಿನ ಮೇರೆಗೆ ನೇಮಕಗೊಂಡ ಜಯಪ್ರಕಾಶಹೆಗ್ಡೆ ಸುಮಾರು 3 ವರ್ಷಗಳ ಕಾಲ ಮೌನದಿಂದ ಇದ್ದು ಅವರ ಅಧಿಕಾರ ಇದೇ ನವೆಂಬರ್ 2023ಕ್ಕೆ ಮುಕ್ತಾಯಗೊಳುತ್ತಿದ್ದು ವರದಿ ಜಾರಿಗೆ ಒತ್ತಡ ಹೆಚಾಗುತ್ತಿದ್ದಂತೆ ದಿಢೀರನೆ ಎಚ್ಚೆತ್ತುಕೊಂಡಿರುವ ಜಯಪ್ರಕಾಶ ಹೆಗ್ಡೆ ಅವರು ನವೆಂಬರ್ 2023ರ ಅಂತ್ಯದೊಳಗೆ ಸಮೀಕ್ಷೆಯ ವರದಿಯನ್ನು ಸರ್ಕಾರಕ್ಕೆ ಸಲ್ಲಿಸುವುದಾಗಿ ಮಾಧ್ಯಮಗಳಿಗೆ ಹೇಳಿಕೆ ನೀಡಿರುತ್ತಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯನವರು ವರದಿಯ ಮಹತ್ವವನ್ನು ಮನಗಂಡು ಆಯೋಗದ ಅಧ್ಯಕ್ಷರಿಗೆ ಮತ್ತೊಂದು ತಿಂಗಳ ಕಾಲಾವಕಾಶ ನೀಡಿ ಹಿಂದುಳಿದ ಮತ್ತು ಅತಿ ಹಿಂದುಳಿದ ಸಮಾಜದ ಹಿತಾಸಕ್ತಿ ತೋರ್ಪಡಿಸಿರುತ್ತಾರೆ. ರಾಜ್ಯ ಹಾಗೂ ರಾಷ್ಟದಲ್ಲಿ ಹಿಂದುಳಿದ ಹಾಗೂ ಅತಿ ಹಿಂದುಳಿದ ವರ್ಗದವರು ತುಳಿತಕ್ಕೊಳಗಾಗಿದ್ದು ಕಷ್ಟಕರ ಜೀವನ ನಡೆಸುತ್ತಿದ್ದಾರೆ. ಇವರ ಬದುಕನ್ನು ಬದಲಾಯಿಸಿ ಸಾಮಾಜಿಕ ಸ್ಥಾನ ಮಾನ ನೀಡುವ ನಿಟಿನಲ್ಲಿ ಕಾಂತರಾಜ ವರದಿಯ ಅನುಷ್ಠಾನಕ್ಕಾಗಿ ಶಿವಮೊಗ್ಗದಲ್ಲಿ ಸಮಾವೇಶ, ಧರಣಿ ನಡೆಸಲಾಯಿತು.

ಈ ಮಧ್ಯೆವರದಿ ಸಲ್ಲಿಕೆಯ ವಿಳಂಬಕ್ಕೆ ಕೆಲವು ತಾಂತ್ರಿಕ ಅಂಶಗಳನ್ನು ತೇಲಿ ಬಿಡಲಾಗುತ್ತಿದೆ ಇದು ಅತ್ಯಂತ ಖಂಡನಾರ್ಹ. ಒಟ್ಟಾರೆ ವರದಿ ಸಲ್ಲಿಕೆ. ಎಷ್ಟು ವಿಳಂಬವಾಗ ಬೇಕೋ ಅಷ್ಟು ರಾಜಕೀಯ ತಂತ್ರಗಾರಿಕೆ ನಡೆಯುತ್ತಿದೆ. ಕರ್ನಾಟಕದಲ್ಲಿ ಕಾಂತರಾಜ ಆಯೋಗದ ವರದಿ ಸಲ್ಲಿಕೆಗೆ ಮತ್ತಷ್ಟು ಒತ್ತಡ ಹೆಚ್ಚಾಗುತ್ತಿದ್ದಂತೆ ಒಂದೆರೆಡು ಬಲಾಢ್ಯ ಜಾತಿಗಳ ಮುಖಂಡರು ವರದಿ ಜಾರಿಯಾಗದಂತೆ ಅನೇಕ ಷಡ್ಯಂತ್ರಗಳನ್ನು ಹೆಣೆಯುತ್ತಿದಾರೆ. ಅವರ ಷಡ್ಯಂತ್ರಗಳಿಗೆ ನಿಜವಾದ ಕಾರಣವೇನೆಂದರೆ ಸೌಲಭ್ಯ ವಂಚಿತ ಸಮುದಾಯಗಳಿಗೆ ಕಾಂತರಾಜ ವರದಿಯಿಂದ ಜನಸಂಖ್ಯೆಗೆ ಅನುಗುಣವಾಗಿ ರಾಜಕೀಯ, ಆರ್ಥಿಕ, ಶೈಕ್ಷಣಿಕ, ಉದ್ಯೋಗ ಕ್ಷೇತ್ರಗಳಲ್ಲಿ ಪ್ರಾತಿನಿಧ್ಯ ದೊರೆಯುತ್ತದೆ ಎಂಬ ಅಸೂಸೆಯೇ ನಿಜವಾದ ಕಾರಣ ಎನ್ನುವುದರಲ್ಲಿ ಅನುಮಾನವಿಲ್ಲ ಎಂದಿದ್ದಾರೆ.

ಸುದ್ದಿ ಗೋಷ್ಠಿಯಲ್ಲಿ ಕುರುಬ ಸಮಾಜದ ಯುವ ಮುಖಂಡ ಮಂಜುನಾಥ , ಕಾಂಗ್ರೆಸ್ ಒಬಿಸಿ ವಿಭಾಗದ ಅಧ್ಯಕ್ಷರು ಮತ್ತು ಸವಿತ ಸಮಾಜದ ಎನ್ ಡಿ ಕುಮಾರ್ , ಪ್ರಸನ್ನ, ಕುಂಬಾರ ಸಮಾಜದ ಕುಮಾರ್ ಉಪಸ್ಥಿತರಿದ್ದರು.

# ದುಡಿಯುವಜನರು ಮಕ್ಕಳ ಶಿಕ್ಷಣಕ್ಕೆ ಆದ್ಯತೆ ನೀಡಬೇಕು

» **ಚಿತ್ರದುರ್ಗ**



ಕಾರ್ಮಿಕರಾಗಿದುಡಿಯುವಜನರು ಮಕ್ಕಳ ಶಿಕ್ಷಣಕ್ಕೆ ಆದ್ಯತೆ ನೀಡುವಜೊತೆಗೆ ಸರ್ಕಾರಿ ಶಾಲೆಗಳಲ್ಲಿ ತಮ್ಮ ಮಕ್ಕಳನ್ನು ಶಿಕ್ಷಣ ಕೊಡಿಸಲು ಮುಂದಾಗಬೇಕೆಂದು ಹಿರಿಯ ವಕೀಲ ಹಾಗೂ ಕರ್ನಾಟಕ ಕೊಳಗೇರಿ ಸಂಯುಕ್ತ ಸಂಘಟನೆಯಗೌರವಾಧ್ಯಕ್ಷಬಿ.ಕೆ.ರಹಮತ್‌ಉಲ್ಲಾ ಹೇಳಿದರು.

ಪತ್ರಿಕಾ ಭವನದಲ್ಲಿ ಕೊಳಗೇರಿ ಸಂಯುಕ್ತ ಸಂಘಟನೆ ಮತ್ತುಕರ್ನಾಟಕ ಮುಸ್ಲಿಂ ಕಲ್ಚರಲ್‌ಅಕಾಡೆಮಿಇವರ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಕನ್ನಡರಾಜ್ಯೋತ್ಸವ ಮತ್ತು ಕೊಳಗೇರಿ ನಿವಾಸಿಗಳಿಗೆ ಹೊದಿಕೆ ವಿತರಣಾ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ದುಡಿಯುವಜನರುತಮ್ಮ ಮಕ್ಕಳಿಗೆ ಕಡ್ಡಾಯ ಶಿಕ್ಷಣ ಕೊಡಿಸುವಜೊತೆಗೆ ಸರ್ಕಾರಿ ಶಾಲೆಗಳಲ್ಲಿ ಸೇರಿಸಲು ಸಲಹೆ ನೀಡಿದ ಬಿ.ಕೆ.ರಹಮತ್‌ಉಲ್ಲಾ ಪ್ರಸ್ತುತ ಹಾಲಿ ಇರುವಂತಹ ರಾಜಕಾರಣಿಗಳು, ಸಾಹಿತಿಗಳು, ಬರಹಗಾರರು, ವಕೀಲರು, ಅತಿ ಹೆಚ್ಚು ಜನ ಸರ್ಕಾರಿ ಶಾಲೆಗಳಲ್ಲಿಯೇ ಶಿಕ್ಷಣ ಪಡೆದಂತವರು, ಹಾಗಾಗಿ ದುಡಿಯುವ ವರ್ಗ ಸರ್ಕಾರಿ ಶಾಲೆಗಳನ್ನೇ ಆಯ್ಕೆ ಮಾಡಿಕೊಂಡು ಮಕ್ಕಳಿಗೆ ಶಿಕ್ಷಣ ಕೊಡಿಸುವಲ್ಲಿ ಮುಂದಾಗಬೇಕೆಂದು ಹೇಳಿದರು.

ಅಲ್ಪಸಂಖ್ಯಾತರು, ದಲಿತರು, ಕೊಳಗೇರಿಗಳಲ್ಲಿ ಹೆಚ್ಚು ವಾಸವಾಗಿದ್ದು, ತಮ್ಮ ಮಕ್ಕಳಿಗೆ ಮದುವೆ ಮಾಡುವ ವಯಸ್ಸನ್ನು ಸರ್ಕಾರ ನಿಗಧಿಗೊಳಿಸಿರುವ 18 ಮತ್ತು 21 ವಯಸ್ಸಿಗೆ ಮಕ್ಕಳಿಗೆ ಮದುವೆಮಾಡಿಸುವ ಮೂಲಕ ಸರ್ಕಾರಿ ಕಾನೂನುಗಳನ್ನು ಗೌರವಿಸಬೇಕೆಂದು ಬಿ.ಕೆ.ರಹಮತ್‌ಉಲ್ಲಾ ನುಡಿದರು.

ವಕೀಲರಾದ ದಿಲ್ಷಾದ್‌ಉನ್ನೀಸಾ ಮಾತನಾಡಿ ಕೊಳಗೇರಿ ನಿವಾಸಿಗಳಲ್ಲಿ ಮಾನವೀಯತೆ, ಧರ್ಮದಅನುಕರಣೆ ಹೆಚ್ಚಿದ್ದು, ಪ್ರತಿಯೊಬ್ಬರೂಕೂಡ ಸಮಾಜದಲ್ಲಿ ಸಮಾನರು ಹಾಗಾಗಿ ಮೇಲು ಕೀಳು ಎಂಬ ಭಾವನೆಗಳನ್ನು ತೊರೆದು ಪ್ರತಿಯೊಬ್ಬರು ಸಮಾನತೆಯಿಂದ ಬದುಕು ನಡೆಸಿದಾಗ ಸಮ-ಸಮಾಜವನ್ನುಕಾಣಲು ಸಾಧ್ಯವೆಂದು ಹೇಳಿದರು.

ಚಳಿಗಾಲದ ಸಂದರ್ಭದಲ್ಲಿ ಕೊಳಗೇರಿ ನಿವಾಸಿಗಳ ಸಂಘಟನೆಗಳಿಂದಬಡವರಿಗೆಹೊದಿಕೆ ನೀಡುವಕಾರ್ಯಕ್ರಮ ಪುಣ್ಯಕಾರ್ಯವಾಗಿದ್ದು, ಈ ಕೆಲಸವನ್ನು ಮಾಡುತ್ತಿರುವಗಣೇಶ ಮತ್ತು ಹನೀಫ್‌ಅಂತಹವರು ಬಡಜನರ ಪ್ರೀತಿಗೆ ಸದಾ ಪಾತ್ರರಾಗುತ್ತಾರೆಎಂದು ನುಡಿದರು.

ರೋಟರಿ ಇನ್ನರ್ ವೀಲ್ ಕ್ಲಬ್ ಅಧ್ಯಕ್ಷೆ ಶ್ರೀಮತಿ ಮೋಕ್ಷರುದ್ರಸ್ವಾಮಿ ಮಾತನಾಡಿ, ಇನ್ನರ್‌ವೀಲ್‌ಕ್ಲಬ್ ವತಿಯಿಂದ ಬಡವರಿಗೆಆರೋಗ್ಯತಪಾಸಣೆ, ಶಿಕ್ಷಣ ಕೊಡಿಸುವ ಕೆಲಸ, ಬಡವರು ಮತ್ತು ಸಾಮಾನ್ಯರ ಕೆಲಸವನ್ನು ಮಾಡಿಕೊಂಡು ಬರಲಾಗಿದ್ದು, ಮುಂದಿನ ದಿನಮಾನಗಳಲ್ಲಿ ಬಡವರು ಮತ್ತು ಅಲೆಮಾರಿಗಳನ್ನು ಆಯ್ಕೆಮಾಡಿಕೊಂಡು ಕಾರ್ಯಕ್ರಮಗಳನ್ನು ರೂಪಿಸಲಾಗುತ್ತದೆಎಂದು ಹೇಳಿದರು.

ಕರ್ನಾಟಕ ಕೊಳಗೇರಿ ನಿವಾಸಿಗಳ ಸ 'ಂಘಟನೆಯಅಧ್ಯಕ್ಷಗಣೇಶಅವರು ಮಾತನಾಡಿ, ಪ್ರತಿವರ್ಷ ಬಡ, ವಯೋವೃದ್ಧ ಮಹಿಳೆಯರಿಗೆ ಮತ್ತು ಪುರಷರಿಗೆಕೆ.ಕೆ.ಎನ್.ಎಸ್. ಸಂಘಟನೆ ವತಿಯಿಂದ ಹೊದಿಕೆ, ಮಕ್ಕಳಿಗೆ ಪಠ್ಯಪುಸ್ತಕ, ನೋಟ್ ಪುಸ್ತಕಗಳನ್ನು ವಿತರಣೆಮಾಡಿಕೊಂಡು ಬರುವ ಮೂಲಕ ಬಡ ನಿರ್ಗತಿಕ ಮಹಿಳೆಯರಿಗೆ ಪಿಂಚಣಿ, ಆರೋಗ್ಯ ವಿಮೆ, ಆರೋಗ್ಯ ಶಿಬಿರಗಳನ್ನು ನಡೆಸಿಕೊಂಡು ಬರಲಾಗಿದ್ದು, ಈ ಬಾರಿಯ ಹೊದಿಕೆ ಕಾರ್ಯಕ್ರಮವನ್ನು ಕೊಳಗೇರಿ ನಿವಾಸಿಗಳಿಗೆ ವಿತರಣೆಮಾಡಲಾಗುತ್ತಿದೆಎಂದು ಹೇಳಿದರು.

### ಬಾಲಕಾರ್ಮಿಕ ಪದ್ಧತಿ ನಿಷೇಧ ಕುರಿತು ಜಾಗೃತಿ

# ಗ್ಯಾರೇಜ್‌ನಲ್ಲಿ ಕೆಲಸ: ಬಾಲಕನ ರಕ್ಷಣೆ



» **ಚಿತ್ರದುರ್ಗ**

ಪಾನ್-ಇಂಡಿಯಾ ರೆಸ್ಕ್ಯೂ ಅಂಡ್ ರಿಹ್ಯಾಬಿಲಿಟೇಶನ್ ಕ್ಯಾಂಪೈನ್ ಆಫ್ ಚೈಲ್ಡ್ ಅಂಡ್ ಅಡೋಲ್ಸೆಂಟ್ ರಕ್ಷಣಾ ಕಾರ್ಯಾಚರಣೆ ಪ್ರಯುಕ್ತ ಚಿತ್ರದುರ್ಗ ನಗರ ವ್ಯಾಪ್ತಿಯಲ್ಲಿ ಬಾಲ್ಯಾವಸ್ಥೆ ಹಾಗೂ ಕಿಶೋರವಸ್ಥೆ ಕಾರ್ಮಿಕ ನಿಷೇಧ 1986ರ ಕಾಯ್ದೆ ಅಡಿ ಮಂಗಳವಾರ ಅನಿರೀಕ್ಷಿತ ದಾಳಿ ಕೈಗೊಳ್ಳಲಾಯಿತು. ದಾಳಿಯಲ್ಲಿ ಕಾರ್ ಆಟೋ ಕೇರ್ ಗ್ಯಾರೇಜ್‌ನಲ್ಲಿ ಬಾಲಕಾರ್ಮಿಕನಾಗಿ ಕೆಲಸ ನಿರ್ವಹಿಸುತ್ತಿದ್ದ ಬಾಲಕಾರ್ಮಿಕನನ್ನು ಪತ್ತೆ ಹಚ್ಚಿ, ಕೆಲಸದಿಂದ ಬಿಡುಗಡೆಗೊಳಿಸಿ ಬಾಲಕರ ಬಾಲ ಮಂದಿರಕ್ಕೆ ಹಾಜರು ಪಡಿಸಲಾಯಿತು. ಚಿತ್ರದುರ್ಗ ನಗರದ ವಿವಿಧ ವಾಣಿಜ್ಯ ಸಂಸ್ಥೆಗಳಾದ ಹೋಟೆಲ್, ಗ್ಯಾರೇಜ್, ಬೇಕರಿ ಅಂಗಡಿಗಳಿಗೆ ಭೇಡಿ ನೀಡಿ ಸ್ಟೀಕರ್ಸ್ ಹಾಗೂ ಕರಪತ್ರಗಳನ್ನು ಸಂಸ್ಥೆಯ ಮಾಲೀಕರಿಗೆ ನೀಡುವ ಮೂಲಕ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಾಯಿತು. ದಾಳಿ ಸಂದರ್ಭದಲ್ಲಿ ಚಿತ್ರದುರ್ಗ ಕಾರ್ಮಿಕ ನಿರೀಕ್ಷಕ ಡಿ.ರಾಜಣ್ಣ, ಯೋಜನಾ ನಿರ್ದೇಶಕ ಪಿ.ಸತೀಶ್ ಕುಮಾರ್, ಪೊಲೀಸ್ ಇಲಾಖೆಯ ಸುನೀಲ್ ಇದ್ದರು.

## ಪ್ರಮುಖ ಸುದ್ದಿ

# ರಾಜ್ಯೋತ್ಸವ: ಡಾ.ರಾಜ್, ಪುನಿತ್ ಮೆರವಣಿಗೆ ವೈಭವ

» **ಹೊಸದುರ್ಗ**



ತಾಲ್ಲೂಕಿನ ಡಾ. ರಾಜ್, ಪುನೀತ್ ರಾಜಕುಮಾರ್, ಕನ್ನಡ ಅಭಿಮಾನಿಗಳ ಸಂಘದ ವತಿಯಿಂದ ಪಟ್ಟಣದಲ್ಲಿ ಸೋಮವಾರ 68 ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನ ವೈಭವಯುತವಾಗಿ ಆಚರಿಸುವ ಸಲುವಾಗಿ ಸೋಮವಾರ ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಡಾ: ರಾಜ್, ಪುನಿತ್‌ರಾಜ್ ಕುಮಾರ್ ಅವರ ಅದ್ದೂರಿ ಮೆರವಣಿಗೆ ವೈಭವ ಜರುಗಿತು.

ಪಟ್ಟಣದ ವೀರಭದ್ರೇಶ್ವರ ಸ್ವಾಮಿ ದೇವಾಲಯದ ಆವರಣದಲ್ಲಿ ಶಾಸಕ ಬಿ ಜಿ ಗೋವಿಂದಪ್ಪ ಮೆರವಣಿಗೆಗೆ ಚಾಲನೆ ನೀಡಿದರು. ನಂತರ ಮೆರವಣಿಗೆ ಕಲಾತಂಡಗಳ ಸಮ್ಮುಖದಲ್ಲಿ ಟಿ. ಬಿ. ವೃತ್ತದವರೆಗೂ ನಡೆಯಿತು. ಮೆರವಣಿಗೆಯಲ್ಲಿ ಒನಕೆ ಓಬವ್ವ, ಭುವನೇಶ್ವರಿ ದೇವಿ, ಮದಕರಿನಾಯಕನ ಸ್ತಬ್ಧ ಚಿತ್ರಗಳು ಆಕರ್ಷಣಿಯವಾಗಿದ್ದವು, ಕೆನರಾ ಬ್ಯಾಂಕ್ ಮುಂಭಾಗದ ವೃತ್ತದಲ್ಲಿ ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಹೆಚ್ ಬಿಲ್ಲಪ್ಪ ಧ್ವಜಾರೋಹಣ ನೇರವೇರಿಸಿದರು. ನಂತರ ಟಿ. ಬಿ. ವೃತ್ತದಲ್ಲಿ ಇರುವ ಕನ್ನಡ ಭವನದಲ್ಲಿ ಧ್ವಜಾರೋಹಣ ನಡೆಯಿತು ಸಂಜೆಯ ಹೊತ್ತಿಗೆ ಮೆರವಣಿಗೆ ಮುಗಿದ ನಂತರ ಅಶೋಕ ರಂಗಮಂದಿರದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು

ಮೆರವಣಿಗೆ ಸಂಧರ್ಬದಲ್ಲಿ ಸಂಘದ ಗೌರವಾಧ್ಯಕ್ಷರಾದ ಅಗ್ರೋ ಹೆಚ್.ಶಿವಣ್ಣ, ಶೀಥಲ್‌ಕುಮಾರ್, ಅಧ್ಯಕ್ಷ ಎಮ್.ಎಸ್. ನಾಗರಾಜ್, ಉಪಾಧ್ಯಕ್ಷ ರಾಮಚಂದ್ರಪ್ಪ, ಶಹಜಾನ್,ಪ್ರಧಾನಕಾರ್ಯದರ್ಶಿತಂಗಾಳಿ ತಮ್ಮಣ್ಣ, ಸಂಘಟನಾ ಕಾರ್ಯದರ್ಶಿ ಎಂ. ಸುರೇಶ್, ಜಂಟಿ ಕಾರ್ಯದರ್ಶಿ ಜಾದೂ ವಿ ಮೋಹನ್ ಕುಮಾರ್, ಖಜಾಂಚಿ ಆರ್. ತಿಮ್ಮಣ್ಣ, ಸಂಘಟನಾ ಕಾರ್ಯಧರ್ಶಿ ಸನಾವುಲ್ಲಾಖಾಲನ್, ಸೇರಿದಂತೆ ಸಂಘದ ನಿರ್ಧೇಶಕರು ಹಾಗೂ ಸರ್ವ ಸದಸ್ಯರುಗಳು ಭಾಗಿಯಾಗಿದ್ದರು. ಕನ್ನಡ ಪರ ಸಮಾಜ ಸೇವೆಗಾಗಿ 1982ರಲ್ಲಿ ದಿವಂಗತ ಟಿ.ಎಂ.ವಾಸು ಅವರು ಡಾ.ರಾಜ್ ಕನ್ನಡ ಅಭಿಮಾನಿಗಳ ಸಂಘವನ್ನ ಹುಟ್ಟುಹಾಕಿದ್ದರು ಅದರ ಜೋತೆ ಜೋತೆಗೆ ಪುನೀತ್ ರಾಜಕುಮಾರ್, ಕನ್ನಡ ಅಭಿಮಾನಿಗಳ ಸಂಘವನ್ನ ಹುಟ್ಟುಹಾಕಲಾಯಿತು. ಅಂದಿನಿಂದ ಇಂದಿನವರೆಗೂ ಪ್ರತಿ ವರ್ಷ ಕನ್ನಡ ರಾಜ್ಯೋತ್ಸವ ಆಚರಿಸಲಾಗುತ್ತಿದೆ.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T